# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣುಕು

## 25-03-2022



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ಉದಯ ವಾಣಿ
6. ವಿಶ್ವವಾಣಿ
7. ಹೊಸ ದಿಗಂತ
8. ಸಂಜೆ ವಾಣಿ
9. ಈ ಸಂಜೆ

ಪ್ರಜಾವಾಣಿ

ರಸ್ತೆ ಗುಣಮಟ್ಟ ಕಳಪೆ: ವಿಧಾನಪರಿಷತ್‌ನಲ್ಲಿ ಎಸ್. ರವಿ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ

# ವೈಟ್ ಟಾಪಿಂಗ್ ರದ್ದು: ಬೊಮ್ಮಾಯಿ ಸುಳಿವು

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ಭಾರಿ ವೆಚ್ಚ ತಗಲುವುದರಿಂದ ನಗರದ ರಸ್ತೆಗಳ ವೈಟ್ ಟಾಪಿಂಗ್ ಬಗ್ಗೆ ಮರು ಚಿಂತನೆ ನಡೆಸಲಾಗುತ್ತಿದೆ. ಅಲ್ಲದೆ, ರಸ್ತೆಗಳ ಸಮಗ್ರ ನಿರ್ವಹಣೆಗೆ ವಿಶೇಷ ಕೋಡ್ ವ್ಯವಸ್ಥೆ ಜಾರಿಗೆ ತರಲು ಉದ್ದೇಶಿಸಲಾಗಿದೆ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಕಳಪೆ ಗುಣಮಟ್ಟದ ರಸ್ತೆಯ ಬಗ್ಗೆ ವಿಧಾನಪರಿಷತ್‌ನಲ್ಲಿ ಕಾಂಗ್ರೆಸ್‌ನ ಎಸ್. ರವಿ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, 'ಬೆಂಗಳೂರಿನಲ್ಲಿ 12 ಅತಿ ದಟ್ಟಣೆಯ ರಸ್ತೆಗಳ ಕಾಮಗಾರಿಯ ಟೆಂಡರ್ ರದ್ದುಪಡಿಸಲಾಗಿದೆ. ಪರಿಷ್ಕೃತ ದರದಲ್ಲಿ ಶೀಘ್ರದಲ್ಲಿ ಮರು ಟೆಂಡರ್ ಆಹ್ವಾನಿಸಲಾಗುವುದು' ಎಂದರು.

'ಅತಿ ದಟ್ಟಣೆಯ ರಸ್ತೆಗಳಿಗೆ ₹ 800 ಕೋಟಿ ವೆಚ್ಚ ನಿಗದಿ ಮಾಡಲಾಗಿತ್ತು. ಈ ಯೋಜನೆಯಲ್ಲಿ ರಸ್ತೆ ಮಾಡಲು ₹ 300 ಕೋಟಿ, ಐದು ವರ್ಷದ ರಸ್ತೆ ನಿರ್ವಹಣೆಗೆ ₹ 500 ಕೋಟಿ ವೆಚ್ಚ ನಿಗದಿಪಡಿಸಲಾಗಿತ್ತು. ಬಿಬಿಎಂಪಿ ಕಾಯ್ದೆ ಪ್ರಕಾರ ರಸ್ತೆ ನಿರ್ಮಿಸಿದವರೇ ಎರಡು ವರ್ಷ ರಸ್ತೆ ನಿರ್ವಹಣೆಯನ್ನೂ ಮಾಡಬೇಕಿದೆ. ಆ ವೆಚ್ಚವನ್ನು ಟೆಂಡರ್‌ನಲ್ಲಿ ಸೇರಿಸಲಾಗಿತ್ತು. ಹೀಗಾಗಿ, ಈ ಟೆಂಡರ್ ರದ್ದುಪಡಿಸಲಾಗಿದೆ' ಎಂದರು.

'ಒಂದು ಕಿ.ಮೀ ಉದ್ದದ ರಸ್ತೆ ಡಾಂಬರೀಕರಣಕ್ಕೆ ₹ 75 ಲಕ್ಷದಿಂದ ₹ 1 ಕೋಟಿ ವೆಚ್ಚ ತಗಲಲಿದೆ. ಪ್ರತಿ ಕಿ.ಮೀ ವೈಟ್ ಟಾಪಿಂಗ್‌ಗೆ ಸುಮಾರು ₹ 9 ಕೋಟಿಯಿಂದ ₹ 10 ಕೋಟಿ ವೆಚ್ಚ ತಗಲುತ್ತಿದೆ. ವೈಟ್ ಟಾಪಿಂಗ್ ರಸ್ತೆಗಳ ನಿರ್ವಹಣೆ ವೆಚ್ಚ ಕಡಿಮೆ ಇದ್ದರೂ, ಸಾಮಾನ್ಯ ಡಾಂಬರೀಕರಣ ಮಾಡಿದರೆ ಕಡಿಮೆ ವೆಚ್ಚವಾಗಲಿದೆ. ವೈಟ್ ಟಾಪಿಂಗ್ ಮಾಡಿದರೆ ವೆಚ್ಚ 10 ಪಟ್ಟು ಹೆಚ್ಚಾಗುತ್ತಿದೆ' ಎಂದರು.

'ಬೆಂಗಳೂರಿನ ರಸ್ತೆ ಗುಂಡಿಗಳಲ್ಲಿ 11 ಜನ ಮೃತಪಟ್ಟಿದ್ದಾರೆ. ರಸ್ತೆ ಗುಂಡಿಯಲ್ಲಿ ಗಾಯಗೊಂಡವರಿಗೆ ಯಾವ ರೀತಿ ಪರಿಹಾರ ನೀಡಲಾಗಿದೆ. ರಸ್ತೆ ಗುಂಡಿ ಮುಚ್ಚಲು ಅಗತ್ಯವಾದ ಪೈಥಾನ್ ಯಂತ್ರ ಖರೀದಿಸಲು ಸರ್ಕಾರಕ್ಕೆ ಏನು ತೊಂದರೆ' ಎಂದು ರವಿ ಖಾರವಾಗಿ ಪ್ರಶ್ನಿಸಿದರು.

'ಖಾಸಗಿಯವರಿಂದ ಪೈಥಾನ್ ಯಂತ್ರ ಬಾಡಿಗೆ ಪಡೆದು 182 ಕಿಲೋ ಮೀಟರ್ ರಸ್ತೆಯಲ್ಲಿ ಗುಂಡಿ ಮುಚ್ಚಿಸಲಾಗುತ್ತಿದೆ. 442 ಕಿಲೋ ಮೀಟರ್ ರಸ್ತೆಯಲ್ಲೂ ಗುಂಡಿ ಮುಚ್ಚಲು ಸೂಚಿಸಲಾಗಿದೆ' ಎಂದೂ ಮುಖ್ಯಮಂತ್ರಿ ತಿಳಿಸಿದರು.

'ಬಿಬಿಎಂಪಿಯ ಕೆಲಸಗಳನ್ನು ಕೆಆರ್‌ಐಡಿಎಲ್‌ಗೆ ಯಾರ ಕಾಲದಲ್ಲಿ ಗುತ್ತಿಗೆ ನೀಡಲಾಗಿತ್ತು. ಅಧಿಕಾರಿಗಳು ಸರ್ಕಾರದ ಮೇಲೆ ಯಾವ ರೀತಿಯಲ್ಲಿ ಪ್ರಭಾವ ಬೀರಿದರು ಎಂಬುದೆಲ್ಲವನ್ನೂ ಲೋಕಾಯುಕ್ತ ವರದಿ ಆಧರಿಸಿ ತನಿಖೆ ನಡೆಸಲಾಗುವುದು. ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಲಾಗುವುದು' ಎಂದು ಮುಖ್ಯಮಂತ್ರಿ ಭರವಸೆ ನೀಡಿದರು.

## 'ಕೆಆರ್‌ಐಡಿಎಲ್ ನೀಡಿದ್ದ ಕಾಮಗಾರಿ ರದ್ದು'

**ಬೆಂಗಳೂರು:** 'ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮಕ್ಕೆ (ಕೆಆರ್‌ಐಡಿಎಲ್) ಕಾಮಗಾರಿ ನೀಡುವುದನ್ನು ನಾವು ಅಧಿಕಾರಕ್ಕೆ ಬಂದ ಬಳಿಕ ನಿಲ್ಲಿಸಿದ್ದೇವೆ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್ಸಿನ ಕೆ. ಗೋವಿಂದರಾಜು ಅವರು ಕಾಮಗಾರಿಗಳನ್ನು ಕೆಆರ್‌ಐಡಿಎಲ್‌ಗೆ ನೀಡುತ್ತಿರುವುದರಿಂದ ಗುಣಮಟ್ಟ ಹದಗೆಡುತ್ತಿರುವ ಬಗ್ಗೆ ಪ್ರಸ್ತಾಪಿಸಿದರು.

ಅದಕ್ಕೆ ಮುಖ್ಯಮಂತ್ರಿ, 'ವಿರೋಧ ಪಕ್ಷದಲ್ಲಿದ್ದಾಗ ಆ ಸಂಸ್ಥೆಗೆ ಕೆಲಸ ನೀಡಬಾರದು ಎನ್ನುವುದು, ಅಧಿಕಾರಕ್ಕೆ ಬಂದ ಬಳಿಕ ಅದೇ ಸಂಸ್ಥೆಗೆ ಕೆಲಸ ನೀಡಿ ತಮಗೆ ಬೇಕಾದಂತೆ ಬಳಕೆ ಮಾಡಿಕೊಳ್ಳುವುದನ್ನು ಸರಿಯಲ್ಲ. ಪ್ರಗತಿ ಪರಿಶೀಲನೆ ನಡೆಸಿದಾಗ ಈ ಸಂಸ್ಥೆಯ ಕೆಲಸದ ಗುಣಮಟ್ಟ ಸರಿ ಇಲ್ಲ ಎನ್ನುವುದು ಮನವರಿಕೆಯಾಗಿದೆ. ಹೀಗಾಗಿ, ಕೆಲವು ಟೆಂಡರ್ ರದ್ದುಗೊಳಿಸಲಾಗಿದೆ' ಎಂದರು.

'ಪ್ರಗತಿಯಲ್ಲಿರುವ, ಬಾಕಿ ಇರುವ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಹಾಗೂ ಗುಣಮಟ್ಟ ಸುಧಾರಿಸಲು ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಬಿಬಿಎಂಪಿಯಿಂದಲೇ ಕೆಲಸ ಮಾಡಿಸಲಾಗುವುದು' ಎಂದು ಭರವಸೆ ನೀಡಿದರು.

'ಬೆಂಗಳೂರಿನಲ್ಲಿ 7011 ಕಿಲೋ ಮೀಟರ್ ರಸ್ತೆಯನ್ನು ₹ 6,767 ಕೋಟಿ ಖರ್ಚು ಮಾಡಿ ಅಭಿವೃದ್ಧಿಪಡಿಸಲಾಗುತ್ತಿದೆ. 4,761 ಕೆಲಸಗಳು ಪ್ರಗತಿಯಲ್ಲಿವೆ. ಕಾವೇರಿ ನೀರು ಪೂರೈಸುವ ಕೊಳವೆ ಮಾರ್ಗದಲ್ಲಿ ರಸ್ತೆ ಕುಸಿದಿರುವುದನ್ನು ದುರಸ್ತಿ ಮಾಡಲು ಹೆಚ್ಚಿನ ಅನುದಾನ ನೀಡಲಾಗುವುದು' ಎಂದೂ ಮುಖ್ಯಮಂತ್ರಿ ತಿಳಿಸಿದರು.

## ಪಂಚಾಯತ್ ರಾಜ್ ತಿದ್ದುಪಡಿ ಮಸೂದೆಗೆ ಅಂಗೀಕಾರ

**ಬೆಂಗಳೂರು:** ಶಿಕ್ಷೆಗೊಳಗಾದ ಮತ್ತು ಶಿಸ್ತು ಕ್ರಮಕ್ಕೆ ಒಳಗಾದ ಸರ್ಕಾರಿ ನೌಕರರು, ಸಹಕಾರಿ ಸಂಸ್ಥೆಗಳ ನೌಕರರುಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸುವ ಪ್ರಸ್ತಾವವುಳ್ಳ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ತಿದ್ದುಪಡಿ ಮಸೂದೆ– 2022ಕ್ಕೆ ವಿಧಾನಸಭೆ ಗುರುವಾರ ಅಂಗೀಕಾರ ನೀಡಿತು.

ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಪುನರ್‌ವಿಂಗಡಣೆಗೆ ಜನಸಂಖ್ಯೆಯ ಮಿತಿ ನಿಗದಿಪಡಿಸುವ, ಜಿಲ್ಲಾ ಯೋಜನಾ ಸಮಿತಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸುವುದಕ್ಕೆ ಸಂಬಂಧಿಸಿದ ಅಂಶಗಳೂ ಮಸೂದೆಯಲ್ಲಿವೆ.

## 'ನೈಸ್: ರೈತರ ಹಿತಾಸಕ್ತಿಗೆ ಬದ್ಧ'

**ಬೆಂಗಳೂರು:** 'ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್' (ನೈಸ್) ಸಂಸ್ಥೆಯ ಬೆಂಗಳೂರು– ಮೈಸೂರು ಹೆದ್ದಾರಿ ಯೋಜನೆ (ಬಿಎಂಐಸಿಎಲ್) ವಿಷಯದಲ್ಲಿ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದೆ' ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಮುರುಗೇಶ ನಿರಾಣಿ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಗುರುವಾರ ಈ ಬಗ್ಗೆ ನಡೆದ ಚರ್ಚೆಗೆ ಉತ್ತರಿಸಿದ ಅವರು, 'ಈ ಯೋಜನೆಗೆ ಸಂಬಂಧಿಸಿದಂತೆ ನೈಸ್ ಮತ್ತು ಸರ್ಕಾರದ ವತಿಯಿಂದ ಇದುವರೆಗೆ 400 ಎಫ್‌ಐಆರ್‌ಗಳು ದಾಖಲಾಗಿದ್ದವು. ಇವುಗಳಲ್ಲಿ 300 ಪ್ರಕರಣಗಳು ಇತ್ಯರ್ಥಗೊಂಡಿವೆ. ಉಳಿದ 100 ಪ್ರಕರಣಗಳು ನ್ಯಾಯಾಲಯದಲ್ಲಿವೆ' ಎಂದು ವಿವರಿಸಿದರು.

'1994–95ರಲ್ಲಿ ಎಚ್.ಡಿ. ದೇವೇಗೌಡ ಅವರು ಒಳ್ಳೆಯ ಉದ್ದೇಶದಿಂದ ಈ ಯೋಜನೆಗೆ ಚಾಲನೆ ನೀಡಿದ್ದರು. ನಂತರ, 11 ಮುಖ್ಯಮಂತ್ರಿಗಳು ಬದಲಾಗಿದ್ದಾರೆ. ಈ ಯೋಜನೆಯಿಂದಾಗಿ ವಿವಾದಗಳೇ ಹೆಚ್ಚು ಎನ್ನುವ ಸಂದೇಶ ಹೂಡಿಕೆದಾರರಿಗೆ ತಲುಪಿದೆ. ಹೀಗಾಗಿ, 27 ವರ್ಷಗಳಿಂದ ಇತ್ಯರ್ಥವಾಗದಿರುವ ವಿವಾದಗಳನ್ನು ಸೌಹಾರ್ದಯುತವಾಗಿ ಬಗೆಹರಿಸಲು ಪ್ರಯತ್ನಿಸಲಾಗುವುದು' ಎಂದು ತಿಳಿಸಿದರು.

'ಈ ಯೋಜನೆಗೆ 13,237 ಎಕರೆ ಖಾಸಗಿ ಜಮೀನು ಮತ್ತು 6,956 ಎಕರೆ ಸರ್ಕಾರಿ ಜಮೀನು ಸೇರಿದಂತೆ ಒಟ್ಟು 20,193 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗಿದೆ. 1997ರಲ್ಲಿ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಈ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ಸಂಪುಟ ಉಪಸಮಿತಿ ರಚಿಸಿದ್ದು, ವಿವಾದಗಳು ಇತ್ಯರ್ಥವಾದರೆ ರೈತರಿಗೂ ಉತ್ತಮ ಪರಿಹಾರ ದೊರೆಯುತ್ತದೆ. ಹೀಗಾಗಿ, ನ್ಯೂನ್ಯತೆಗಳನ್ನು ಸರಿಪಡಿಸುವ ಕುರಿತು ಆದ್ಯತೆ ನೀಡಲಾಗುವುದು' ಎಂದರು. ಜೆಡಿಎಸ್‌ನ ಕೆ.ಟಿ. ಶ್ರೀಕಂಠೇಗೌಡ ಮಾತನಾಡಿ, 'ನೈಸ್ ರಸ್ತೆಯನ್ನು ಎನ್‌ಎಚ್‌ಎಐಗೆ ವಹಿಸಲು ವಿಶೇಷ ಕಾಯ್ದೆ ರೂಪಿಸಿ. ಇದುವರೆಗೆ ನೈಸ್ ಸಂಸ್ಥೆ ಹಣ ಕೊಳ್ಳೆ ಹೊಡೆದಿದ್ದು ಸಾಕು. ನಾಡಿನ 1.25 ಲಕ್ಷ ರೈತರ ಹಿತಾಸಕ್ತಿಯನ್ನು ಸರ್ಕಾರ ಕಾಪಾಡಬೇಕು' ಎಂದು ಒತ್ತಾಯಿಸಿದರು.

ಪ್ರಜಾವಾಣಿ

### ಸಾವಯವ ಗೊಬ್ಬರ ತಯಾರಿಕಾ ಘಟಕದಿಂದ ವಾಯು ಮಾಲಿನ್ಯ

# ಕೆಸಿಡಿಸಿ ಘಟಕ: ತಪ್ಪದ ದುರ್ವಾಸನೆ

## ಹೊರ ವಲಯ ಒಳ ಬೇಗುದಿ

• ಲಿಂಗರಾಜು

**ಬೊಮ್ಮನಹಳ್ಳಿ:** ದುರ್ವಾಸನೆಯಲ್ಲಿ ಮುಳುಗಿರುವ ಕೂಡ್ಲು, ಪರಂಗಿಪಾಳ್ಯ, ಹರಳೂರು ಸೋಮಸಂದ್ರಪಾಳ್ಯ ಹಾಗೂ ಹೊಸಪಾಳ್ಯ ನಿವಾಸಿಗಳು, ಸಾವಯವ ಗೊಬ್ಬರ ತಯಾರಿಕಾ ಘಟಕ ಮುಚ್ಚಬೇಕು ಎಂಬ ದಶಕಗಳ ಕೂಗು ಆಳುವವರ ಕಿವಿಗೇ ಮುಟ್ಟಿಲ್ಲ.

ಕೂಡ್ಲು ಗ್ರಾಮದ ಹರಳೂರು ರಸ್ತೆಯಲ್ಲಿನ ಕರ್ನಾಟಕ ಸಾವಯವ ಗೊಬ್ಬರ ಅಭಿವೃದ್ಧಿ ನಿಗಮದ (ಕೆಸಿಡಿಸಿ) ಈ ಘಟಕದಿಂದ ಸೂಸುವ ದುರ್ವಾಸನೆ ಸುತ್ತಮುತ್ತಲ ಮೂರು ಕಿಲೋ ಮೀಟರ್ ಆವರಿಸಿಕೊಂಡಿದೆ.

ಮಕ್ಕಳು ಮತ್ತು ಹಿರಿಯ ನಾಗರಿಕರು ಉಸಿರಾಟದ ತೊಂದರೆ ಸೇರಿ ಅನೇಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಚರ್ಮ ರೋಗಗಳು ಹೆಚ್ಚುತ್ತಿವೆ. ಸೊಳ್ಳೆ ಮತ್ತು ನೊಣಗಳ ಕಾಟದಿಂದ ಸಾಂಕ್ರಾಮಿಕ ರೋಗಗಳು ಹರಡುತ್ತಿವೆ. ಕಣ್ಣು ಉರಿ, ವಾಂತಿ ಬರುವುದು ಇಲ್ಲಿನ ನಿವಾಸಿಗಳಿಗೆ ಸಾಮಾನ್ಯವಾಗಿದೆ. ಕ್ಯಾನ್ಸರ್‌ಗೆ ತುತ್ತಾಗುವ ಆತಂಕವೂ ಜನರನ್ನು ಕಾಡುತ್ತಿದೆ.

‘ಅಂತರ್ಜಲ ಮತ್ತು ಗಾಳಿಯ ಗುಣಮಟ್ಟ ಕುಸಿದಿದೆ. ಈ ಭಾಗದ ಕೊಳವೆ ಬಾವಿಗಳಲ್ಲಿ ಗಡಸು ನೀರು ಬರುತ್ತಿದೆ. ಕೆಲವೆಡೆ ಹಳದಿ ಬಣ್ಣದ ನೀರು ಬರುತ್ತಿದ್ದು, ಕುಡಿಯಲು ಮಾತ್ರವಲ್ಲ ಬಟ್ಟೆ ತೊಳೆಯಲು ಯೋಗ್ಯವಾಗಿಲ್ಲ. ಈ ಭಾಗದ ಜೀವಜಲ ಕಲುಷಿತಗೊಂಡಿದೆ’ ಎಂದು ಸ್ಥಳೀಯರು ಹೇಳುತ್ತಾರೆ.

‘75 ಟನ್ ಕ್ಷಮತೆಯ ಈ ಘಟಕದಲ್ಲಿ ನಿಯಮ ಮೀರಿ 200 ಟನ್‌ಗೂ ಹೆಚ್ಚಿನ ಗೊಬ್ಬರ ಸಂಸ್ಕರಣೆ ಮಾಡಲಾಗುತ್ತಿದೆ. ಇತ್ತೀಚೆಗೆ ಬಯೋ ಫಿಲ್ಟರ್ ಯಂತ್ರಗಳನ್ನು ಅಳವಡಿಸಲಾಗಿದೆ. ಆದರೆ, ಈ ಯಂತ್ರಗಳು ಚಾಲನೆಯಲ್ಲಿ ಇಲ್ಲ. ಇಲ್ಲಿನ ಉಪ ಉತ್ಪನ್ನಗಳನ್ನು ಖರೀದಿಸುತ್ತಿದ್ದ ಕಂಪನಿಗಳು ಕೋವಿಡ್ ಬಳಿಕ ಖರೀದಿ ನಿಲ್ಲಿಸಿವೆ. ಹೀಗಾಗಿ, ಕೊಳೆತ ವಾಸನೆ ಹೆಚ್ಚಾಗಿದೆ. ಈ ಎಲ್ಲ ದುಷ್ಪರಿಣಾಮಗಳ ವಿರುದ್ಧ ದಶಕಗಳಿಂದಲೂ ‘ಸ್ವಚ್ಛ ಗಾಳಿ ನಮ್ಮ ಹಕ್ಕು’ ಎಂಬ ಘೋಷಣೆಯಡಿ ಸ್ಥಳೀಯರು ಹೋರಾಟ ನಡೆಸಿಕೊಂಡು ಬಂದಿದ್ದಾರೆ. ಆದರೂ, ಸಮಸ್ಯೆ ಬಗೆಹರಿದಿಲ್ಲ’ ಎಂದು ಅವರು ದೂರುತ್ತಾರೆ.

‘ಶಾಸಕ ಎಂ. ಸತೀಶ್ ರೆಡ್ಡಿ, ಸಂಸದರಾದ ತೇಜಸ್ವಿ ಸೂರ್ಯ, ರಾಜೀವ್ ಚಂದ್ರಶೇಖರ್ ಅವರು ಸ್ಥಳಕ್ಕೆ ಭೇಟಿ ನೀಡಿ ಘಟಕ ಸ್ಥಳಾಂತರಿಸುವ ಭರವಸೆ ನೀಡಿದ್ದರು. ಆದರೆ, ಎಂಟು ವರ್ಷಗಳಿಂದಲೂ ನಮ್ಮ ಕೂಗಿಗೆ ಬೆಲೆ ಸಿಕ್ಕಿಲ್ಲ. ಮನೆಗೆ ನೆಂಟರಿಷ್ಟರನ್ನು ಕರೆಯುವುದನ್ನೇ ಬಿಟ್ಟಿದ್ದೇವೆ. ನಮ್ಮ ಸಿಟ್ಟು ರಟ್ಟೆಗೆ ಬರುವ ಮುನ್ನ ಕ್ರಮಕೈಗೊಳ್ಳಲಿ. ಇಲ್ಲದಿದ್ದಲ್ಲಿ ಉಗ್ರ ಪ್ರತಿಭಟನೆ ಅನಿವಾರ್ಯ’ ಎಂದು ನಿವಾಸಿಗಳ ಕ್ರಿಯಾ ಸಮಿತಿ ಪ್ರಧಾನ ಕಾರ್ಯದರ್ಶಿ ರಮಾಕಾಂತ್ ನರಗುಂದ್ ಹೇಳುತ್ತಾರೆ.

‘ಸುತ್ತಮುತ್ತ ಸುಮಾರು 15ಕ್ಕೂ ಹೆಚ್ಚು ಶಾಲೆಗಳಿವೆ. ಮಕ್ಕಳು ಇದರಿಂದ ತೀವ್ರ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದಾರೆ. ಸ್ವಚ್ಛ ಗಾಳಿಗಾಗಿ ಹೋರಾಟ ಮಾಡಬೇಕಾದ ಪರಿಸ್ಥಿತಿ ಎದುರಾಗಿರುವುದು ದುರದೃಷ್ಟಕರ’ ಎನ್ನುತ್ತಾರೆ ಸ್ಥಳೀಯರಾದ ವಿಜಯಕುಮಾರ್.

‘ನಾವು ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಲೆಮನ್ ಗ್ರಾಸ್ ಸಿಂಪಡಿಸಿ ಸಮಸ್ಯೆಯನ್ನು ಮುಚ್ಚಿ ಹಾಕುತ್ತಾರೆ. ಶಾಶ್ವತ ಪರಿಹಾರದ ಕುರಿತು ಯಾರೊಬ್ಬರೂ ಯೋಚಿಸುತ್ತಿಲ್ಲ. ಇದರಿಂದ ರೋಸಿ ಹೋಗಿದ್ದೇವೆ’ ಎನ್ನುತ್ತಾರೆ ಸೋಮಸಂದ್ರಪಾಳ್ಯ ನಿವಾಸಿ ಕಾಮೇಶ್.

‘ನ್ಯಾಯಾಲಯದ ಸೂಚನೆಯಂತೆ ಕೆಸಿಡಿಸಿ ಘಟಕವನ್ನು ಪರಿಶೀಲಿಸಿ ಘಟಕವನ್ನು ಮುಚ್ಚುವಂತೆ ಆದೇಶ ನೀಡಲಾಗಿತ್ತು. ಆಡಳಿತ ಮಂಡಳಿಯು ಮಾಲಿನ್ಯ ತಡೆಗಟ್ಟುತ್ತೇವೆಂಬ ಭರವಸೆ ನೀಡಿದ್ದರಿಂದ ಮೂರು ವಾರಗಳಲ್ಲಿ ಮಾಲಿನ್ಯ ನಿಯಂತ್ರಣದ ಕಾರ್ಯಯೋಜನೆ ಸಲ್ಲಿಸುವಂತೆ ಗಡುವು ನೀಡಲಾಗಿತ್ತು. ಆದರೆ, ಕಾರ್ಯಯೋಜನೆ ಕೈಸೇರಿಲ್ಲ’ ಎಂದು ಪರಿಸರ ಅಧಿಕಾರಿ ಸುಧಾಕರ್ ಹೇಳಿದರು.

### ‘ಬಯೋ ಫಿಲ್ಟರ್ ಅಳವಡಿಕೆಗೆ ಕ್ರಮ’

‘ಮಾಲಿನ್ಯ ನಿಯಂತ್ರಣ ಮಂಡಳಿ ನಿರ್ದೇಶನದಂತೆ ನೂತನ ತಂತ್ರಜ್ಞಾನದ ಬಯೋ ಫಿಲ್ಟರ್ ಅಳವಡಿಸಿದ್ದೇವೆ. ಜೈವಿಕ ವೈದ್ಯಕೀಯ ಸಸ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಕೆಸಿಡಿಸಿ ವ್ಯವಸ್ಥಾಪಕ ನಿರ್ದೇಶಕ ಹಾಗೂ ಬಿಬಿಎಂಪಿ ಜಂಟಿ ಆಯುಕ್ತ ಎಂ.ರಾಮಕೃಷ್ಣ ಹೇಳಿದರು.

‘ಕಾಂಪೌಂಡ್ ಸುತ್ತಲೂ ಗಿಡಗಳನ್ನು ಹಾಕಲಾಗಿದೆ. ಪರಿಸರ ಎಂಜಿನಿಯರ್‌ಗಳ ನೇಮಕ ಪ್ರಕ್ರಿಯೆಯೂ ನಡೆದಿದೆ. ಅಕಸ್ಮಾತ್ ವಾಸನೆ ಬಂದ ಸಂದರ್ಭದಲ್ಲಿ ಲೆಮನ್ ಗ್ರಾಸ್ ಸಿಂಪಡಣೆ ಮಾಡುತ್ತಿದ್ದೇವೆ’ ಎಂದು ಅವರು ಸ್ಪಷ್ಟಪಡಿಸಿದರು.



ಕೆಸಿಡಿಸಿ ಘಟಕದಲ್ಲಿ ಶೇಖರಣೆಯಾಗಿರುವ ಕಸದ ರಾಶಿ

### ‘ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶಕ್ಕೆ ಕಿಮ್ಮತ್ತಿಲ್ಲ’

ಕೆಸಿಡಿಸಿ ಘಟಕದಿಂದ ಜನಜೀವನದ ಮೇಲೆ ಉಂಟಾಗುತ್ತಿರುವ ಪರಿಣಾಮಗಳ ಕುರಿತು ಕೆಎಚ್‌ಎಚ್‌ಎಸ್‌ಪಿ(ಕೂಡ್ಲು, ಹರಳೂರು, ಹೊಸಪಾಳ್ಯ, ಸೋಮಸಂದ್ರಪಾಳ್ಯ, ಪರಂಗಿಪಾಳ್ಯ) ನಿವಾಸಿ ಕ್ಷೇಮಾಭಿವೃದ್ಧಿ ಸಂಘ ನ್ಯಾಯಾಲಯದ ಮೆಟ್ಟಿಲೇರಿತ್ತು. ಕ್ರಮ ಕೈಗೊಳ್ಳುವಂತೆ ಮಾಲಿನ್ಯ ನಿಯಂತ್ರಣ ಮಂಡಳಿಗೆ ನ್ಯಾಯಾಲಯ ಸೂಚನೆ ನೀಡಿತ್ತು. ಆದರೂ ಸಮಸ್ಯೆ ಪರಿಹಾರವಾಗಿಲ್ಲ.

ಕೆಸಿಡಿಸಿ ಘಟಕವನ್ನು ಮುಚ್ಚುವಂತೆ ಜ. 27 ರಂದು ನೋಟೀಸ್ ಜಾರಿ ಮಾಡಿತ್ತು. ಆದರೆ, ಈವರೆಗೂ ಆದೇಶ ಜಾರಿಯಾಗಿಲ್ಲ. ಸುರಕ್ಷಾ ನಿಯಮಗಳನ್ನು ಪಾಲಿಸಿಲ್ಲ ಎಂಬ ಕಾರಣಕ್ಕಾಗಿ ಕೆಸಿಡಿಸಿ ಘಟಕಕ್ಕೆ ಪರವಾನಗಿಯ ನವೀಕರಣ ನಿರಾಕರಿಸಲಾಗಿದೆ. ಈ ಸಂಬಂಧ ಬೆಸ್ಕಾಂಗೆ ಪತ್ರ ಬರೆದು ವಿದ್ಯುತ್ ಸಂಪರ್ಕ ಕಡಿತಗೊಳಿಸುವಂತೆ ಸೂಚಿಸಲಾಗಿತ್ತು. ಪರವಾನಗಿ ಇಲ್ಲದೆಯೂ ಘಟಕ ಚಾಲನೆಯಲ್ಲಿದೆ ಎಂದು ಸ್ಥಳೀಯರು ದೂರುತ್ತಾರೆ.

### ಬೊಮ್ಮನಹಳ್ಳಿ ಕ್ಷೇತ್ರ: ನಾಳೆ ಜನಸ್ಪಂದನ

ಜನಸ್ಪಂದನ
ಸಿಟಿಜ಼ನ್ಸ್ ಫಾರ್ ಚೇಂಜ್

ಬೆಂಗಳೂರು: ಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಜನರ ಅಹವಾಲು ಆಲಿಸುವ ಸಲುವಾಗಿ ‘ಪ್ರಜಾವಾಣಿ–ಡೆಕ್ಕನ್ ಹೆರಾಲ್ಡ್’ ಪತ್ರಿಕೆಗಳ ವತಿಯಿಂದ ಇದೇ 26ರಂದು ಜೆ.ಪಿ.ನಗರ ಆರನೇ ಹಂತದ ಗಣೇಶ ದೇವಸ್ಥಾನ ಮೈದಾನದಲ್ಲಿ ‘ಜನಸ್ಪಂದನ’ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಶಾಸಕ ಎಂ.ಸತೀಶ ರೆಡ್ಡಿ, ಬಿಬಿಎಂಪಿ, ಜಲಮಂಡಳಿ, ಬಿಡಿಎ, ಬೆಸ್ಕಾಂ, ಪೊಲೀಸ್ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಹಿಸಿ ಸಾರ್ವಜನಿಕರ ಅಹವಾಲು ಆಲಿಸಲಿದ್ದಾರೆ. ಈ ಕ್ಷೇತ್ರದ ನಿವಾಸಿಗಳು ಸ್ಥಳೀಯ ಸಮಸ್ಯೆಗಳನ್ನು ನೇರವಾಗಿ ಶಾಸಕರ ಹಾಗೂ ಅಧಿಕಾರಿಗಳ ಗಮನಕ್ಕೆ ತಂದು ಬಗೆಹರಿಸಿಕೊಳ್ಳಬಹುದು.

ಆಸಕ್ತರು ಬೆಳಿಗ್ಗೆ 9ರಿಂದ ಸ್ಥಳದಲ್ಲೇ ಹೆಸರು ನೋಂದಾಯಿಸಬಹುದು. ಮೊದಲು ನೋಂದಣಿ ಮಾಡಿಸಿದವರಿಗೆ ಆದ್ಯತೆ. ಬೆಳಿಗ್ಗೆ 10ರಿಂದ ಮಧ್ಯಾಹ್ನ 1 ಗಂಟೆವರೆಗೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಸ್ಥಳ: ಗಣೇಶ ಮೈದಾನ, 186, ಪುಟ್ಟೇನಹಳ್ಳಿ ರಸ್ತೆ, ಕೆ.ಆರ್.ಬಡಾವಣೆ, ಜೆ.ಪಿ.ನಗರ ಆರನೇ ಹಂತ, ಬೆಂಗಳೂರು–78

ಸಂಪರ್ಕ: 9448528998

ಪ್ರಜಾವಾಣಿ

# ಅಕ್ಷಯಾ ಪೋಷಕರಿಗೆ ₹ 8 ಲಕ್ಷ ಪರಿಹಾರ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಹೆಬ್ಬಾಳದ ಬಳಿ ರಸ್ತೆ ದಾಟುವ ವೇಳೆ ಬಿಬಿಎಂಪಿಯ ಕಸದ ಲಾರಿ ಡಿಕ್ಕಿ ಹೊಡೆದು ಮೃತಪಟ್ಟ ಬಾಲಕಿ ಅಕ್ಷಯಾ ಅವರ ತಂದೆ ನರಸಿಂಹಮೂರ್ತಿ ಹಾಗೂ ತಾಯಿ ಗೀತಾ ಅವರಿಗೆ ಬುಧವಾರ ಒಟ್ಟು ₹ 8 ಲಕ್ಷ ಪರಿಹಾರ ವಿತರಿಸಲಾಯಿತು.

ಬಿಬಿಎಂಪಿ ವತಿಯಿಂದ ₹ 5 ಲಕ್ಷ , ಸ್ಥಳೀಯ ಶಾಸಕ ಬೈರತಿ ಸುರೇಶ್ ಅವರು ₹ 3 ಲಕ್ಷ ಸೇರಿದಂತೆ ಒಟ್ಟು ₹ 8 ಲಕ್ಷ ಪರಿಹಾರ ಚೆಕ್ ಅನ್ನು ಶಾಸಕ ಬೈರತಿ ಸುರೇಶ್ ಹಾಗೂ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತ ಅವರು ಪೋಷಕರಿಗೆ ವಿತರಿಸಿದರು.

'ಸಂತ್ರಸ್ತ ಕುಟುಂಬಕ್ಕೆ ಕಸದ ಲಾರಿಯ ಮಾಲಿಕರಿಂದ ₹ 2 ಲಕ್ಷ ಪರಿಹಾರವನ್ನು ಕೊಡಿಸಲಾಗುವುದು' ಎಂದು ಬಿಬಿಎಂಪಿ ಗೌರವ್ ಗುಪ್ತ ಭರವಸೆ ನೀಡಿದರು.

'ರಸ್ತೆ ಸುರಕ್ಷತೆಯ ಬಗ್ಗೆ ನಾವು ಮತ್ತಷ್ಟು ಜಾಗ್ರತೆ ವಹಿಸಬೇಕಿದೆ. ಘಟನೆ ನಡೆದಿರುವ ಸ್ಥಳದ ಬಳಿಯೇ 8 ತಿಂಗಳ ಹಿಂದೆಯೇ ಪಾದಚಾರಿ ಮೇಲುಸೇತುವೆಯನ್ನು ಉದ್ಘಾಟಿಸಲಾಗಿತ್ತು. ಬಳಕೆಯೋಗ್ಯವಾಗಿರುವಂತೆ ಅದನ್ನು ನಿರ್ವಹಿಸಲು ಕ್ರಮವಹಿಸಬೇಕು. ಪಾದಚಾರಿ ಕೆಳ ಸೇತುವೆಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು' ಎಂದು ಗೌರವ್ ಗುಪ್ತ ತಿಳಿಸಿದರು.



ರಸ್ತೆ ಅಪಘಾತದಲ್ಲಿ ಅಕ್ಷಯಾ ಅವರ ಗೀತಾ ಮತ್ತು ತಂದೆ ನರಸಿಂಹಮೂರ್ತಿ ಅವರಿಗೆ ಬೈರತಿ ಸುರೇಶ್ ಹಾಗೂ ಗೌರವ್ ಗುಪ್ತ ಅವರು ಪರಿಹಾರದ ಚೆಕ್ ವಿತರಿಸಿದರು. ಅಬ್ದುಲ್ ವಾಜಿದ್ ಇದ್ದಾರೆ

'ಮೇಲ್ಸೇತುವೆ ಹಾಗೂ ಕೆಳಸೇತುವೆಗಳನ್ನು ಸರಿಯಾಗಿ ನಿರ್ವಹಣೆ ಮಾಡದ ಅಧಿಕಾರಿ ವಿರುದ್ಧ ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಮೃತ ಬಾಲಕಿಯ ಪೋಷಕರ ಇನ್ನಿಬ್ಬರು ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ ಕೊಡಿಸಲು ಕ್ರಮಕೈಗೊಳ್ಳಲಿದ್ದೇವೆ' ಎಂದು ತಿಳಿಸಿದರು.

ಪೂರ್ವ ವಲಯ ಆಯುಕ್ತ ಮನೋಜ್ ಜೈನ್, ವಲಯ ಜಂಟಿ ಆಯುಕ್ತರಾದ ಶಿಲ್ಪಾ, ಸ್ಥಳಿಯ ಮುಖಂಡ ಅಬ್ದುಲ್ ವಾಜಿದ್ ಉಪಸ್ಥಿತರಿದ್ದರು.

ಪ್ರಜಾವಾಣಿ

2022 ಜೂನ್ 30ರ ಬಳಿಕ ಬಿಬಿಎಂಪಿ ವಾರ್ಡ್‌ಗಳ ಮರುವಿಂಗಡಣೆಗೆ ಇಲ್ಲ ಅವಕಾಶ

# ಚುನಾವಣೆ ದೀರ್ಘ ಕಾಲ ಮುಂದೂಡಿಕೆ?

• ಪ್ರವೀಣ್ ಕುಮಾರ್ ಪಿ.ವಿ.

ಪ್ರಜಾವಾಣಿ ವಿಶೇಷ

ಬೆಂಗಳೂರು: ರಾಜ್ಯದಲ್ಲಿ ಜನಗಣತಿ ಪ್ರಕ್ರಿಯೆಗೆ ತಯಾರಿ ನಡೆಯುತ್ತಿದ್ದು, ಎಲ್ಲ ತಾಲ್ಲೂಕುಗಳು, ಗ್ರಾಮಗಳು ಹಾಗೂ ನಗರಾಡಳಿತ ಪ್ರದೇಶಗಳ ಮೇರೆಗಳನ್ನು ಪರಿಷ್ಕರಿಸುವ ಪ್ರಕ್ರಿಯೆ ನಡೆಯುತ್ತಿದ್ದರೆ ಅವುಗಳನ್ನು 2022ರ ಜೂನ್ 30ರ ಒಳಗೆ ಪೂರ್ಣಗೊಳಿಸಬೇಕು ಎಂದು ಕಂದಾಯ ಇಲಾಖೆ ಆದೇಶ ಹೊರಡಿಸಿದೆ. ಬಿಬಿಎಂಪಿ ವಾರ್ಡ್ ಮರುವಿಂಗಡಣಾ ಪ್ರಕ್ರಿಯೆ ಜೂನ್ 30ರ ಒಳಗೆ ಪೂರ್ಣಗೊಳ್ಳದೇ ಹೋದರೆ, ಚುನಾವಣೆ ದೀರ್ಘ ಕಾಲ ಮುಂದಕ್ಕೆ ಹೋಗುವ ಸಾಧ್ಯತೆ ಇದೆ.

'ತಾಲ್ಲೂಕು, ನಗರಾಡಳಿತ ಸಂಸ್ಥೆಗಳು ಹಾಗೂ ಗ್ರಾಮಗಳಲ್ಲಿ ಆಡಳಿತಾತ್ಮಕ ಸೀಮೆಗಳನ್ನು ಪರಿಷ್ಕರಿಸಿ ಹೊಸ ಘಟಕಗಳನ್ನು ರಚಿಸುವ ಪ್ರಸ್ತಾವನೆಗಳು ಬಾಕಿ ಇದ್ದರೆ ಜೂನ್ 30ರ ಒಳಗೆ ಪೂರ್ಣಗೊಳಿಸಿ ಜನಗಣತಿ ನಡೆಸುವುದನ್ನು ಖಾತರಿ ಪಡಿಸಬೇಕು. ಆ ಬಳಿಕ ಜನಗಣತಿ ಕಾರ್ಯ ಪೂರ್ಣಗೊಳ್ಳುವವರೆಗೆ ಆಡಳಿತಾತ್ಮಕ ಘಟಕಗಳಲ್ಲಿ ಯಾವುದೇ ಬದಲಾವಣೆ ಮಾಡುವುದಕ್ಕೆ ಅವಕಾಶ ಇಲ್ಲ' ಎಂದು ಕಂದಾಯ ಇಲಾಖೆಯ ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ವಾರ್ಡ್ ಮರುವಿಂಗಡಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಆಸಕ್ತಿಯನ್ನೇ ತೋರಿಸದಿರುವುದು ಬಿಬಿಎಂಪಿ ಚುನಾವಣೆಯ ನಿರೀಕ್ಷೆಯಲ್ಲಿರುವ ವಿವಿಧ ಪಕ್ಷ ಸ್ಥಳೀಯ ಮುಖಂಡರಲ್ಲಿ ಕಳವಳ ಹೆಚ್ಚಿಸಿದೆ.

'ಒಮ್ಮೆ ಜನಗಣತಿ ಆರಂಭವಾದರೆ, ಅದರ ಅಂಕಿ ಅಂಶ ಆಧರಿಸಿ ಚುನಾವಣೆ ನಡೆಸುವ ಸಾಧ್ಯತೆ ಹೆಚ್ಚು. ಜನಗಣತಿ ನಡೆಸಿ, ಅಂಕಿ ಅಂಶ ವಿಶ್ಲೇಷಿಸಿ ವರದಿ ಬಿಡುಗಡೆಯಾಗಲು ಏನಿಲ್ಲವೆಂದರೂ ಎರಡು ವರ್ಷ ಕಾಲಾವಕಾಶ ಬೇಕು. ಅಲ್ಲಿವರೆಗೂ ಬಿಬಿಎಂಪಿ ಚುನಾವಣೆ ಮುಂದೂಡಿದರೂ ಆಶ್ಚರ್ಯವಿಲ್ಲ' ಎಂದು ಬಿಜೆಪಿ ಪ್ರಮುಖರೊಬ್ಬರು 'ಪ್ರಜಾವಾಣಿ'ಗೆ ತಿಳಿಸಿದರು.

'ಪ್ರತಿವಾರ್ಡ್‌ನಲ್ಲೂ ಪಕ್ಷದ ಟಿಕೆಟ್‌ಗೆ ನಾಲ್ಕೈದು ಆಕಾಂಕ್ಷಿಗಳಿದ್ದಾರೆ. ಒಬ್ಬರಿಗೆ ಟಿಕೆಟ್ ನೀಡಿದರೆ ಉಳಿದವರ ವಿರೋಧ ಕಟ್ಟಿಕೊಳ್ಳಬೇಕಾಗುತ್ತದೆ. ವಿಧಾನಸಭಾ ಚುನಾವಣೆಯಲ್ಲಿ ಇದರಿಂದ ಹಿನ್ನಡೆಯಾಗುವ ಅಪಾಯವಿದೆ. ಹಾಗಾಗಿ ವಿಧಾನಸಭಾ ಚುನಾವಣೆ ಬಳಿಕವೇ ಬಿಬಿಎಂಪಿ ಚುನಾವಣೆ ನಡೆಸುವಂತೆ ಶಾಸಕರು ಸರ್ಕಾರದ ಮೇಲೆ ಒತ್ತಡ ತಂದಿದ್ದಾರೆ. ವಿಧಾನಸಭಾ ಚುನಾವಣೆ ನಡೆದ ವರ್ಷದೊಳಗೆ ಲೋಕಸಭೆ ಚುನಾವಣೆಯೂ ಬರಲಿದೆ. ಅಲ್ಲಿವರೆಗೂ ಬಿಬಿಎಂಪಿ ಚುನಾವಣೆ ನಡೆಯುವುದು ಅನುಮಾನ' ಎಂದರು.

2020ರ ಬಿಬಿಎಂಪಿ ಕಾಯ್ದೆ 2021ರ ಜನವರಿಯಲ್ಲಿ ಜಾರಿಯಾಗಿದ್ದು, ಇದರನ್ವಯ ಪಾಲಿಕೆ ವಾರ್ಡ್‌ಗಳ ಸಂಖ್ಯೆಯನ್ನು 243ಕ್ಕೆ ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದೆ.

ನಗರದ ಹೊರವಲಯದ ಗ್ರಾಮಗಳನ್ನು ಬಿಬಿಎಂಪಿ ವ್ಯಾಪ್ತಿಗೆ ಸೇರಿಸಿ ವಾರ್ಡ್‌ಗಳ ಸಂಖ್ಯೆಯನ್ನು 243ಕ್ಕೆ ಹೆಚ್ಚಿಸುವ ಕುರಿತು ಅಧ್ಯಯನ ನಡೆಸಿ ಶಿಫಾರಸು ಮಾಡುವುದಕ್ಕೆ ಪಾಲಿಕೆಯ ಮುಖ್ಯ ಆಯುಕ್ತರ ನೇತೃತ್ವದಲ್ಲಿ 2021ರ ಜ.29ರಂದು ಅಧಿಕಾರಿಗಳ ಸಮಿತಿಯನ್ನು ಮತ್ತೊಮ್ಮೆ ರಚಿಸಲಾಯಿತು. 2021ರ ಜು. 28ಕ್ಕೆ ಕೊನೆಗೊಂಡಿದ್ದ ಈ ಸಮಿತಿಯ ಅವಧಿಯನ್ನು ಮತ್ತೆ ಆರು ತಿಂಗಳು ವಿಸ್ತರಿಸಲಾಯಿತು. ಅದರ ಗಡುವೂ 2022ರ ಜನವರಿಯಲ್ಲಿ ಕೊನೆಗೊಂಡಿದ್ದು, ಅದನ್ನು ಸರ್ಕಾರ ವಿಸ್ತರಿಸಿಲ್ಲ. ಈ ಸಮಿತಿ ಒಂದೆರಡು ಬಾರಿ ಅನೌಪಚಾರಿಕವಾಗಿ ಸಭೆ ಸೇರಿತ್ತಾದರೂ ವಾರ್ಡ್ ಮರುವಿಂಗಡಣೆ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸಿಲ್ಲ.

'ಪರಿಧಿ ವಿಸ್ತರಿಸಿ ವಾರ್ಡ್ ಮರುವಿಂಗಡಣೆ ಮಾಡುವುದಾದರೆ ಮಾತ್ರ ಬಿಬಿಎಂಪಿಗೆ ಈ ಆದೇಶ ಅನ್ವಯವಾಗುತ್ತದೆ. ಪರಿಧಿಯನ್ನು ಈಗಿನಷ್ಟೇ ಉಳಿಸಿಕೊಂಡು ವಾರ್ಡ್‌ಗಳ ಮರುವಿಂಗಡಣೆ ಮಾಡುವುದಕ್ಕೆ ಅಭ್ಯಂತರ ಇಲ್ಲ' ಎಂದು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ತುಷಾರ್ ಗಿರಿನಾಥ್ 'ಪ್ರಜಾವಾಣಿ'ಗೆ ತಿಳಿಸಿದರು.

## ಮುಖಂಡರು ಏನನ್ನುತ್ತಾರೆ?

### 'ಚುನಾವಣೆ ನಡೆಸಲು ಬಿಜೆಪಿಗೆ ಭಯ'



ಚುನಾವಣೆ ನಡೆಸಲು ನಿಜವಾದ ಆಸಕ್ತಿ ಇದ್ದರೆ ವಾರ್ಡ್ ಮರುವಿಂಗಡಣೆ ಪೂರ್ಣಗೊಳಿಸುತ್ತಿತ್ತು. ನಿರ್ದಿಷ್ಟ ಅವಧಿಯೊಳಗೆ ಚುನಾವಣೆ ನಡೆಸುವುದಾಗಿ ಸುಪ್ರೀಂ ಕೋರ್ಟ್‌ನಲ್ಲಿ ಸರ್ಕಾರವೇ ಪ್ರಮಾಣಪತ್ರ ಸಲ್ಲಿಸುತ್ತಿತ್ತು. ಕೋವಿಡ್ ಹಾಗೂ ಪ್ರವಾಹ ನಿರ್ವಹಣೆಯಲ್ಲಿ ಆಡಳಿತ ವ್ಯವಸ್ಥೆ ವಿಫಲವಾಗಿದೆ. ಈಗ ಚುನಾವಣೆ ನಡೆಸಿದರೆ ಬಿಜೆಪಿಗೆ ಸೋಲು ಖಚಿತ. ಹಾಗಾಗಿ ಚುನಾವಣೆ ನಡೆಸಲು ಸರ್ಕಾರಕ್ಕೆ ಭಯ.

**ಅಬ್ದುಲ್ ವಾಜಿದ್,** ಕಾಂಗ್ರೆಸ್ ಮುಖಂಡ

### '2 ತಿಂಗಳಲ್ಲಿ ಪ್ರಕ್ರಿಯೆ ಮುಗಿಸಬಹುದು'



ಈಗಲೂ ಸರ್ಕಾರ ಮನಸ್ಸು ಮಾಡಿದರೆ ಬಿಬಿಎಂಪಿಯ ಪರಿಧಿಯನ್ನು ಈಗಿರುವಷ್ಟೇ ಉಳಿಸಿಕೊಂಡು ವಾರ್ಡ್ ಮರುವಿಂಗಡಣೆ ಮಾಡಬಹುದು. ಎರಡು ತಿಂಗಳಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬಹುದು. ಆದರೆ, ಬಿಬಿಎಂಪಿ ಚುನಾವಣೆ ನಡೆಯುವುದು ಸರ್ಕಾರಕ್ಕೆ ಬೇಕಿಲ್ಲ.

**ಎಂ.ಶಿವರಾಜು,** ಕಾಂಗ್ರೆಸ್ ಮುಖಂಡ

### 'ಮೇ ತಿಂಗಳಲ್ಲಿ ಚುನಾವಣೆ– ಸಿ.ಎಂ. ಭರವಸೆ'



2022ರ ಮೇ ತಿಂಗಳಲ್ಲಿ ಚುನಾವಣೆ ನಡೆಸುವ ಭರವಸೆಯನ್ನು ಪಕ್ಷದ ಪ್ರಮುಖರ ಸಭೆಯಲ್ಲಿ (ಕಳೆದ ತಿಂಗಳು) ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್ ನೀಡಿದ್ದರು. ಅದರಂತೆ ನಡೆಸಿಕೊಳ್ಳುವ ನಂಬಿಕೆ ಇದೆ. ಯಾವಾಗ ಚುನಾವಣೆ ನಡೆದರೂ ಪಕ್ಷ ಗೆಲ್ಲಲಿದೆ.

**ಪದ್ಮನಾಭ ರೆಡ್ಡಿ,** ಬಿಜೆಪಿ ಮುಖಂಡ

### 'ಜನರ ಅಳಲು ಕೇಳುವವರು ಯಾರು ಇಲ್ಲ'



ರಸ್ತೆ ಗುಂಡಿಗೆ ಬಿದ್ದು ಜನ ಸಾಯುತ್ತಿದ್ದಾರೆ, ಜನರ ಅಳಲನ್ನು ಹೇಳುವವರು ಕೇಳುವವರು ಯಾರು ಇಲ್ಲದ ಸ್ಥಿತಿ ನಿರ್ಮಾಣವಾಗಿದೆ. ಬಿಬಿಎಂಪಿ ಚುನಾವಣೆಯನ್ನು ಸರ್ಕಾರ ಆದಷ್ಟು ಬೇಗ ನಡೆಸಬೇಕು.

**ಆರ್.ಪ್ರಕಾಶ್,** ಜೆಡಿಎಸ್ ನಗರ ಘಟಕದ ಅಧ್ಯಕ್ಷ

# ಇನ್ಮುಂದೆ ಕೆಆರ್‌ಐಡಿಎಲ್‌ಗೆ ಪಾಲಿಕೆ ಗುತ್ತಿಗೆ ಕೊಡಲ್ಲ: ಸಿಎಂ

## ಕಳಪೆ ಕಾಮಗಾರಿ ಆರೋಪ ಹಿನ್ನೆಲೆ: 12 ಕಾಮಗಾರಿ ರದ್ದು ಕೆಆರ್‌ಐಡಿಎಲ್‌ಗೆ ಗುತ್ತಿಗೆ ನೀಡಿದ ಅಧಿಕಾರಿ ವಿರುದ್ಧ ಕ್ರಮ

• **ಕನ್ನಡಪ್ರಭ ವಾರ್ತೆ**
ವಿಧಾನಸಭೆ/ವಿಧಾನಪರಿಷತ್

ಗುಣಮಟ್ಟದ ಕೊರತೆ, ಅನಗತ್ಯ ಸೇವಾ ಶುಲ್ಕ ಪಾವತಿಸುವುದನ್ನು ತಪ್ಪಿಸಲು ಇನ್ನು ಮುಂದೆ ಪಾಲಿಕೆ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಿರುವ ಕಾಮಗಾರಿಗಳನ್ನು ಕೆಆರ್‌ಐಡಿಎಲ್‌ಗೆ ನೀಡುವುದನ್ನು ಸಂಪೂರ್ಣವಾಗಿ ನಿಲ್ಲಿಸಿ, ಪಾಲಿಕೆಯಿಂದಲೇ ಅನುಷ್ಠಾನ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಕಾಂಗ್ರೆಸ್ ಸದಸ್ಯ ಡಾ। ಕೆ.ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ನಗರದಲ್ಲಿ 12 ಹೈ ಡೆನ್ಸಿಟಿ ಕಾರಿಡಾರ್ ಯೋಜನೆ ಕಾಮಗಾರಿಯನ್ನು ಕೆಆರ್‌ಐಡಿಎಲ್‌ಗೆ ನೀಡಿದ್ದ ಟೆಂಡರನ್ನು ರದ್ದು ಮಾಡಲಾಗಿದೆ. ಸದ್ಯ ಈ ಸಂಸ್ಥೆ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಗುಣಮಟ್ಟ ಕಾಪಾಡಿ, ಬೇಗ ಮುಗಿಸಲು ಸೂಚಿಸಲಾಗಿದೆ ಎಂದರು.

ಪ್ರತಿಪಕ್ಷದಲ್ಲಿದ್ದಾಗ ಈ ಸಂಸ್ಥೆಗೆ ಕೊಡಬಾರದು ಎಂದು ಹೇಳುವ ಆಡಳಿತಕ್ಕೆ ಬಂದಾಗ ಕೊಡಬೇಕು ಎಂಬ ನಿಲುವು ಮೊದಲಿನಿಂದಲೂ ತಳೆಯಲಾಗಿದೆ. ಈ ಸಂಸ್ಥೆಗೆ ಕೆಟಿಪಿಪಿ ಕಾಯ್ದೆಯಿಂದ ವಿನಾಯಿತಿ ನೀಡಲಾಗಿದೆ. ಕಳೆದ ಐದು ವರ್ಷಗಳಲ್ಲಿ ಈ ಸಂಸ್ಥೆಗೆ ₹6536.40 ಕೋಟಿ ಮೊತ್ತದ 12,569 ಕಾಮಗಾರಿಗಳನ್ನು ನೀಡಲಾಗಿದೆ. ಈ ಪೈಕಿ 11,808 ಕಾಮಗಾರಿ ಪೂರ್ಣಗೊಳಿಸಲಾಗಿದೆ ಎಂದರು.

ಇದಕ್ಕೂ ಮುನ್ನ ಮಾತನಾಡಿದ ಡಾ। ಗೋವಿಂದರಾಜು, ಈ ಸಂಸ್ಥೆ ಮಾಡಿರುವ ಕಾಮಗಾರಿ ಕಳಪೆಯಾಗಿದೆ. ಅನೇಕ ವ್ಯವಹಾರ ನಡೆಯುತ್ತಿದೆ ಎಂದು ಜನರು ಮಾತನಾಡಿಕೊಳ್ಳುತ್ತಿದ್ದಾರೆ. ಅನಗತ್ಯವಾಗಿ ಶೇ.12 ರಷ್ಟು ಸೇವಾ ಶುಲ್ಕ ಕೊಡಬೇಕಾಗುತ್ತದೆ, ಪಾಲಿಕೆಯಲ್ಲಿ ಸಾಕಷ್ಟು ಎಂಜಿನಿಯರ್‌ಗಳು ಇರುವುದರಿಂದ ಪಾಲಿಕೆಯಿಂದಲೇ ಕಾಮಗಾರಿ ಅನುಷ್ಠಾನ ಮಾಡಬೇಕು ಎಂದು ಮನವಿ ಮಾಡಿದರು.

**ಭ್ರಷ್ಟರ ಬಲಿ:** ಇನ್ನು ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್‌ನ ಎಸ್‌.ರವಿ ಅವರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಬಿಬಿಎಂಪಿ ವ್ಯಾಪ್ತಿಯಲ್ಲಿ ಕೆಆರ್‌ಐಡಿಎಲ್ ನಡೆಸಿದ ಕಾಮಗಾರಿಗಳಲ್ಲಿ ಲೋಪ ಉಂಟಾಗಿದೆ ಎಂಬ ಲೋಕಾಯುಕ್ತ ವರದಿ ಸೇರಿದಂತೆ ಯಾಕೆ ಈ ಸಂಸ್ಥೆಗೆ ಯಾಕೆ ಗುತ್ತಿಗೆ ಕೊಡಲಾಯಿತು, ಯಾರು ಯಾಕೆ ಕೊಟ್ಟರು, ಯಾವ ಅಧಿಕಾರಿ ಕೊಟ್ಟರು ಎಂಬ ವಿಷಯ ಸೇರಿದಂತೆ ತನಿಖೆ ಮಾಡಿ ಸಂಬಂಧಪಟ್ಟ ಅಧಿಕಾರಿಗಳನ್ನು ಬಲಿ ಹಾಕಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಘೋಷಿಸಿದರು.

ಕಾಮಗಾರಿ ನೀಡಿಕೆ ಕುರಿತಂತೆ ಪಾಲಿಕೆ ಇಲ್ಲವೇ ಕೆಆರ್‌ಐಡಿಎಲ್ ಅಧಿಕಾರಿ ಇರಲಿ ಯಾವುದೇ ಮುಲಾಜು ಇಲ್ಲದೇ ಕ್ರಮ ಕೈಗೊಳ್ಳಲಾಗುವುದು, ಈ ಸಂಬಂಧ ಈಗಾಗಲೇ ಮಾಹಿತಿ ಪಡೆದುಕೊಳ್ಳುತ್ತಿದ್ದೇನೆ ಎಂದರು.



### ರಸ್ತೆಗಾಗಿ ಹೊಸ ಪದ್ಧತಿ

ನಗರದ ರಸ್ತೆ ಗುಂಡಿ, ನಿರ್ವಹಣೆ ಕುರಿತು ಪ್ರಶ್ನೆಗೆ ಉತ್ತರಿಸಿದ ಬೊಮ್ಮಾಯಿ ಅವರು, ಡಾಂಬರ್ ರಸ್ತೆಗೆ ಒಂದು ಕಿ.ಮೀ.ಗೆ ₹75 ಲಕ್ಷದಿಂದ ₹1 ಕೋಟಿ ವೆಚ್ಚವಾಗುತ್ತಿದೆ. ವೈಟ್ ಟಾಪಿಂಗ್‌ಗೆ ₹9–10 ಕೋಟಿ ಖರ್ಚಾಗುತ್ತದೆ. ಈ ಬಗ್ಗೆ ತಾವು ಮರು ಚಿಂತನೆ ಮಾಡುತ್ತಿದ್ದೇನೆ. ಹಾಗೆಂದು ತಾವು ವೈಟ್ ಟಾಪಿಂಗ್ ವಿರುದ್ಧವಿಲ್ಲ, ವೈಟ್‌ಟಾಪಿಂಗ್‌ನಿಂದ ಅನುಕೂಲವಿದೆ. ಆದರೆ ಎಲ್ಲಿ ವೈಟ್ ಟಾಪಿಂಗ್ ರಸ್ತೆ ಬೇಕು, ಎಲ್ಲಿ ಡಾಂಬರ್ ರಸ್ತೆ ನಿರ್ಮಾಣ ಮಾಡಬೇಕು ಎಂಬ ಬಗ್ಗೆ ಚಿಂತನೆಯಾಗಬೇಕು, ಹಾಗಾಗಿ ರಸ್ತೆ ಸಲುವಾಗಿ ಹೊಸ ನೀತಿ ತರಲು ಉದ್ದೇಶಿಸಿದ್ದೇನೆ ಎಂದರು.

# ನಾಡಿದ್ದು ಪಾಲಿಕೆ ಆವರಣದಲ್ಲಿ ಪುನೀತ್ ಪುತ್ಥಳಿ ಅನಾವರಣ



• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿರುವ ಡಾ.ರಾಜ್ ಕುಮಾರ್ ಪುತ್ಥಳಿ ಪಕ್ಕದಲ್ಲೇ ಡಾ.ಪುನೀತ್ ರಾಜಕುಮಾರ್ ಪುತ್ಥಳಿ ಪ್ರತಿಸ್ಥಾಪಿಸಲಾಗಿದ್ದು, ಭಾನುವಾರ ಸಂಜೆ 5.30ಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅನಾವರಣ ಮಾಡಲಿದ್ದಾರೆ. ನಟ ಶಿವರಾಜಕುಮಾರ್, ನಟ ರಾಘವೇಂದ್ರ ರಾಜಕುಮಾರ್, ಪುನೀತ್ ರಾಜಕುಮಾರ್ ಅವರ ಪತ್ನಿ ಅಶ್ವಿನಿ, ಶಾಸಕ ರಿಜ್ವಾನ್ ಅರ್ಷದ್, ಸಂಸದ ಪಿ.ಸಿ. ಮೋಹನ್, ಬಿಬಿಎಂಪಿ ಆಡಳಿತಾಧಿಕಾರಿ ರಾಕೇಶ್ ಸಿಂಗ್, ಮುಖ್ಯ ಆಯುಕ್ತ ಗೌರವ್ ಗುಪ್ತಾ ಕಾರ್ಯಕ್ರಮದಲ್ಲಿ ಭಾಗಿಯಾಗಲಿ ದ್ದಾರೆ. ಈ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಪುನೀತ್ ರಾಜಕುಮಾರ್ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಪುತ್ಥಳಿ ನಿರ್ಮಿಸ ಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಎ. ಅಮೃತ್‌ರಾಜ್ ತಿಳಿಸಿದ್ದಾರೆ.

# ಸತತ ನಾಲ್ಕನೇ ದಿನವೂ 100ಕ್ಕಿಂತ ಕಡಿಮೆ ಕೇಸ್

**ಬೆಂಗಳೂರು:** ನಗರದಲ್ಲಿ ಗುರುವಾರ 74 ಮಂದಿಗೆ ಕೊರೋನಾ ಸೋಂಕು ತಗುಲಿದ್ದು, ಒಬ್ಬರು ಸಾವಿಗೀಡಾ ಗಿದ್ದಾರೆ. 90 ಮಂದಿ ಗುಣಮುಖರಾಗಿದ್ದಾರೆ. ಸದ್ಯ 1613 ಸಕ್ರಿಯ ಸೋಂಕಿತರು ಆಸ್ಪತ್ರೆ / ಮನೆಯಲ್ಲಿ ಚಿಕಿತ್ಸೆ, ಆರೈಕೆಯಲ್ಲಿದ್ದಾರೆ. 11582 ಸಾವಿರ ಪರೀಕ್ಷೆ ನಡೆದಿದ್ದು, ಶೇ.0.8ರಷ್ಟು ಪಾಸಿಟಿವಿಟಿ ದರ ದಾಖಲಾಗಿದೆ. ಬುಧವಾರಕ್ಕೆ ಹೋಲಿಸಿದರೆ ಸೋಂಕು ಪರೀಕ್ಷೆಗಳು ಎರಡು ಸಾವಿರ ಇಳಿಕೆಯಾಗಿದೆ. ಸತತ ನಾಲ್ಕನೇ ದಿನ 100ಕ್ಕಿಂತ ಕಡಿಮೆ ಪ್ರಕರಣಗಳು ವರದಿಯಾಗಿವೆ. ಈವರೆಗೆ ಸೋಂಕಿಗೆ ಒಳಗಾದವರ ಸಂಖ್ಯೆ 17.81 ಲಕ್ಷಕ್ಕೆ, ಗುಣಮುಖರ ಸಂಖ್ಯೆ 17.62 ಲಕ್ಷಕ್ಕೆ, ಸಾವಿನ ಸಂಖ್ಯೆ 16,956ಕ್ಕೆ ಏರಿಕೆಯಾಗಿದೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ



# ಬಿಬಿಎಂಪಿ ಕಸದ ಲಾರಿ ಹರಿದು ಸಾವಿಗೀಡಾದ ಅಕ್ಷಯಾ ಕುಟುಂಬಕ್ಕೆ 10 ಲಕ್ಷ ರು. ಪರಿಹಾರ

## ಅಕ್ಷಯಾ ಸಹೋದರ, ಸಹೋದರಿಗೆ ಉಚಿತ ಶಿಕ್ಷಣ, ಮನೆ ನೀಡುವ ಭರವಸೆ ನೀಡಿದ ಬಿಬಿಎಂಪಿ ಗೌರವ್ ಗುಪ್ತಾ, ಶಾಸಕ ಸುರೇಶ್, ಲಾರಿ ಮಾಲಿಕರಿಂದ ಸಂಧಾನ | ಪರಿಹಾರ ಪಡೆಯಲು ಒಪ್ಪಿಗೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಹೆಬ್ಬಾಳದ ಮೇಲ್ಸೇತುವೆ ಬಳಿ ಬಿಬಿಎಂಪಿಯ ಕಸ ತುಂಬಿದ ಲಾರಿ ಹರಿದು ಮೃತಪಟ್ಟ ಬಾಲಕಿ ಅಕ್ಷಯಾ ಕುಟುಂಬಕ್ಕೆ ಬಿಬಿಎಂಪಿಯಿಂದ ₹5 ಲಕ್ಷ, ಶಾಸಕ ಬೈರತಿ ಸುರೇಶ್ ಅವರಿಂದ ₹3 ಲಕ್ಷ ಹಾಗೂ ಕಸದ ಲಾರಿ ಮಾಲಿಕರಿಂದ ₹2 ಲಕ್ಷ ಸೇರಿದಂತೆ ಒಟ್ಟು ₹10 ಲಕ್ಷ ಪರಿಹಾರ ನೀಡಲಾಯಿತು.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಗುರುವಾರ ಮೃತ ಅಕ್ಷಯಾ ಕುಟುಂಬ ಸದಸ್ಯರೊಂದಿಗೆ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತಾ, ಶಾಸಕ ಬೈರತಿ ಸುರೇಶ್, ವಿಶೇಷ ಆಯುಕ್ತ ಮನೋಜ್ ಜೈನ್ ಸಭೆ ನಡೆಸಿದರು. ಈ ವೇಳೆ ಕುಟುಂಬ ಸದಸ್ಯರು ಅಕ್ಷಯಾ ಸಾವಿಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಅಲ್ಲದೇ ಅಪಘಾತ ಸಂಭವಿಸಿದಾಗ ಪಾಲಿಕೆಯ ಯಾವುದೇ ಅಧಿಕಾರಿಗಳು ನಮ್ಮ ಸಹಾಯಕ್ಕೆ ಬಂದಿಲ್ಲ. ಕೊನೆಯ ಪಕ್ಷ ಸಾಂತ್ವನ ಹೇಳುವ ಸೌಜನ್ಯವೂ ಬಿಬಿಎಂಪಿ ಅಧಿಕಾರಿಗಳಿಗೆ ಇಲ್ಲವೇ ಎಂದು ಪ್ರಶ್ನಿಸಿದರು. ಆಗ ಶಾಸಕರು ಮತ್ತು ಮುಖ್ಯ ಆಯುಕ್ತರು ಕುಟುಂಬ ಸದಸ್ಯರನ್ನು ಸಮಾಧಾನಪಡಿಸಿ ಬಿಬಿಎಂಪಿಯಿಂದ ₹5 ಲಕ್ಷ, ಶಾಸಕರಿಂದ ₹3 ಲಕ್ಷ ಹಾಗೂ ಲಾರಿ ಮಾಲಿಕರಿಂದ ₹2 ಲಕ್ಷ ಪರಿಹಾರ ನೀಡಲಾಗುವುದು. ಜತೆಗೆ, ಮೃತ ಅಕ್ಷಯಾ ಸಹೋದರ, ಸಹೋದರಿಗೆ ಉಚಿತ ವಿದ್ಯಾಭ್ಯಾಸ ವ್ಯವಸ್ಥೆ, ಸರ್ಕಾರದ ವಿವಿಧ ವಸತಿ ಯೋಜನೆಯಡಿ ಮನೆ ನೀಡುವ ಭರವಸೆಗೆ ಅಕ್ಷಯಾ ಪೋಷಕರು ಒಪ್ಪಿಕೊಂಡರು.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತಾ, ವಿದ್ಯಾರ್ಥಿನಿ ಅಕ್ಷಯಾ ಸಾವು ಆಕಸ್ಮಿಕವಾಗಿದೆ. ಈ ಸಾವಿನ ನೋವು ಭರಿಸಲು ಯಾರಿಗೂ ಸಾಧ್ಯವಿಲ್ಲ. ಬಹಳ ಬೇಸರದ ಘಟನೆ. ಶಾಸಕರ ನೇತೃತ್ವದಲ್ಲಿ ಕುಟುಂಬ ಸದಸ್ಯರೊಂದಿಗೆ ಮಾತುಕತೆ ನಡೆಸಲಾಗಿದೆ. ಪರಿಹಾರ ನೀಡಲಾಗಿದೆ ಎಂದು ತಿಳಿಸಿದರು.

ಈ ಘಟನೆ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ರಸ್ತೆ ಸುರಕ್ಷತೆಯ ಬಗ್ಗೆ ನಾವು ಮತ್ತಷ್ಟು ಜಾಗರೂಕತೆ ಬೆಳೆಸಿಕೊಳ್ಳಬೇಕು. ಈ ರೀತಿಯ ಘಟನೆ ಮತ್ತೆ ಆಗದಂತೆ ಕ್ರಮ ಕೈಗೊಳ್ಳಬೇಕಿದೆ. ಎಂಟು ತಿಂಗಳ ಹಿಂದೆಯಷ್ಟೇ ಅಪಘಾತ ಸ್ಥಳದಲ್ಲಿ ಸ್ಕೈವಾಕ್ ಲೋಕಾರ್ಪಣೆ ಮಾಡಲಾಗಿದೆ. ಪಾದಚಾರಿ ಮಾರ್ಗ ಸಹ ಜನರ ಓಡಾಟಕ್ಕೆ ಯೋಗ್ಯವಾಗಿರುವಂತೆ ನೋಡಿಕೊಳ್ಳಬೇಕಿದೆ. ನಿರ್ವಹಣೆಯಲ್ಲಿ ವಿಫಲವಾದ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದರು.

ಶಾಸಕ ಬೈರತಿ ಸುರೇಶ್ ಮಾತನಾಡಿ, ಪಾಲಿಕೆಯಿಂದ ನೀಡಲಾದ ₹5 ಲಕ್ಷ ಪರಿಹಾರವನ್ನು ಪೋಷಕರು ನಿರಾಕರಿಸಿದ್ದರು. ಈ ಹಿನ್ನೆಲೆಯಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಒಟ್ಟು ₹10 ಲಕ್ಷ ಪರಿಹಾರ ಕೊಡಿಸುವ ಕೆಲಸ ಮಾಡಲಾಗಿದೆ. ಅದಲ್ಲದೇ ಅಪಘಾತ ವಿಮೆ ಪರಿಹಾರವೂ ಕುಟುಂಬಕ್ಕೆ ಸಿಗಲಿದೆ. ವಸತಿ ಯೋಜನೆಯಡಿ ಮನೆ ಸಹ ನೀಡುವ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಪೂರ್ವ ವಲಯ ಜಂಟಿ ಆಯುಕ್ತೆ ಆರ್.ಶಿಲ್ಪಾ, ಬಿಬಿಎಂಪಿ ವಿರೋಧ ಪಕ್ಷದ ಮಾಜಿ ನಾಯಕ ಅಬ್ದುಲ್ ವಾಜೀದ್, ಪಾಲಿಕೆ ಮಾಜಿ ಸದಸ್ಯ ಆನಂದ್ ಕುಮಾರ್ ಇದ್ದರು.



ರಸ್ತೆ ಅಪಘಾತದಲ್ಲಿ ಮೃತಪಟ್ಟ ಬಾಲಕಿ ಅಕ್ಷಯಾ ಕುಟುಂಬಸ್ಥರಿಗೆ ₹10 ಲಕ್ಷ ಪರಿಹಾರದ ಚೆಕ್ ಅನ್ನು ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತಾ ಹಾಗೂ ಶಾಸಕ ಬೈರತಿ ಸುರೇಶ್ ವಿತರಿಸಿದರು.

3 ವರ್ಷಗಳಲ್ಲಿ ರಸ್ತೆ ದುರಸ್ತಿ, ನಿರ್ಮಾಣಕ್ಕೆ 6,767 ಕೋಟಿ ರೂ. ಖರ್ಚು | ವಿಧಾನಪರಿಷತ್ತಿನಲ್ಲಿ ಸಿಎಂ ಹೇಳಿಕೆ

# ರಸ್ತೆ ಗುಣಮಟ್ಟ ನಿರ್ವಹಣೆಗೆ ಹೊಸ ಸಂಹಿತೆ

■ **ವಿಕ ಸುದ್ದಿಲೋಕ** ಬೆಂಗಳೂರು

ನಗರದ ರಸ್ತೆಗಳ ಅಭಿವೃದ್ಧಿ ಮತ್ತು ದುರಸ್ತಿ ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳುವುದು ಸವಾಲಿನ ಕೆಲಸವಾಗಿದ್ದು, ರಸ್ತೆಗಳ ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳಲು ಹಾಗೂ ನಿರ್ವಹಣೆಗೆ ಹೊಸ ಸಂಹಿತೆ ರೂಪಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿಧಾನ ಪರಿಷತ್ತಿನಲ್ಲಿ ತಿಳಿಸಿದ್ದಾರೆ.

**ರಸ್ತೆ ಅಭಿವೃದ್ಧಿಗೆ ಖರ್ಚಾದ ಮೊತ್ತ**

| ವರ್ಷ | ಮೊತ್ತ (ಕೋಟಿ ರೂ.ಗಳಲ್ಲಿ) |
|---|---|
| 2018-19 | 1080 |
| 2019-20 | 4494 |
| 2020-21 | 1193 |

ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರಾದ ಕೆ.ಗೋವಿಂದರಾಜ್ ಮತ್ತು ಎಸ್. ರವಿ ಕೇಳಿದ ಪ್ರಶ್ನೆಗಳಿಗೆ ಪ್ರತ್ಯೇಕವಾಗಿ ಉತ್ತರಿಸಿದ ಅವರು, ''ನಗರದಲ್ಲಿ ಎಷ್ಟೇ ರಸ್ತೆ ದುರಸ್ತಿ ಮಾಡಿದರೂ ಮತ್ತೆ ಮತ್ತೆ ಗುಂಡಿಗಳಾಗುತ್ತಿವೆ. ಅಲ್ಲದೆ, ಕಳೆದ ಮೂರು ವರ್ಷಗಳಲ್ಲಿ ನಗರದ ರಸ್ತೆ ದುರಸ್ತಿ ಮತ್ತು ನಿರ್ಮಾಣ ಕಾಮಗಾರಿಗೆ 6,767 ಕೋಟಿ ರೂ. ಖರ್ಚು ಮಾಡಲಾಗಿದೆ,'' ಎಂದು ಮಾಹಿತಿ ನೀಡಿದರು.

''ನಗರದ ರಸ್ತೆಗಳ ನಿರ್ವಹಣೆಗೆ ಸಮಗ್ರ ಪರಿಹಾರ ಕಂಡುಕೊಳ್ಳುವ ತುರ್ತು ಅಗತ್ಯವಿದೆ. ಆಗಾಗ್ಗೆ ಹೊಸ ಸವಾಲುಗಳು ಎದುರಾಗುತ್ತಿವೆ. ಹಾಗಾಗಿ, ವೈಟ್ ಟಾಪಿಂಗ್ ರಸ್ತೆಗಳನ್ನು ಮಾಡುವುದು ಆರ್ಥಿಕವಾಗಿ ಹೆಚ್ಚಿನ ಹೊರೆ ಬೀಳುತ್ತದೆ. ಆದರೆ, ಕಾಂಕ್ರೀಟ್ ರಸ್ತೆಗಳಲ್ಲಿ ಪದೇಪದೆ ಗುಂಡಿಗಳಾಗುತ್ತವೆ. ಗುಂಡಿಗಳನ್ನು ಮುಚ್ಚಲು ಪೈಥಾನ್ ಯಂತ್ರ ಬಳಕೆ ಮಾಡಲಾಗುತ್ತಿದೆ. ಮೊದಲು 182 ಕಿ.ಮೀ. ರಸ್ತೆಗಳ ಗುಂಡಿ ಮುಚ್ಚಲು ನಿರ್ಧರಿಸಲಾಗಿತ್ತು, ನಂತರ ಅದನ್ನು 442 ಕಿ.ಮೀ.ಗೆ ವಿಸ್ತರಿಸಲಾಗಿದೆ,'' ಎಂದು ಹೇಳಿದರು. ''ದೀರ್ಘಾವಧಿಯ ರಸ್ತೆಗಳು ಬೇಕೆಂದರೆ ವೈಟ್ ಟಾಪಿಂಗ್ ರಸ್ತೆಗಳನ್ನು ಮಾಡಬೇಕಾಗುತ್ತದೆ. ಆದರೆ ಅದಕ್ಕೆ ಹೆಚ್ಚಿನ ಹಣ ಅಗತ್ಯವಿರುವುದರಿಂದ ಆ ಬಗ್ಗೆಯೂ ಮರುಚಿಂತನೆ ನಡೆಯುತ್ತಿದೆ,'' ಎಂದೂ ಮುಖ್ಯಮಂತ್ರಿ ಹೇಳಿದರು.



**ಆದಷ್ಟು ಶೀಘ್ರ ಟೆಂಡರ್:** ''12 ಹೈಡೆನ್ಸಿಟಿ ಕಾರಿಡಾರ್ ಯೋಜನೆಗಳ ಟೆಂಡರ್ ಅನ್ನು ಆದಷ್ಟು ಶೀಘ್ರ ಅಖೈರುಗೊಳಿಸಲಾಗುವುದು. ಈ ಮೊದಲು ಕರೆದಿದ್ದ ಟೆಂಡರ್‌ನಲ್ಲಿ ಅಧಿಕ ಮೊತ್ತ ನಮೂದಿಸಿದ್ದರಿಂದ ಅದನ್ನು ರದ್ದುಗೊಳಿಸಲಾಗಿತ್ತು. ಇದೀಗ ಹೊಸದಾಗಿ ಟೆಂಡರ್ ಕರೆದು ಕಾಮಗಾರಿ ಕೈಗೊಳ್ಳಲಾಗುವುದು. ಈ ಹಿಂದೆ 800 ಕೋಟಿ ರೂ. ಅಂದಾಜಿಸಲಾಗಿತ್ತು, ಈಗ 400 ಕೋಟಿ ರೂ. ಅಂದಾಜಿಸಲಾಗುತ್ತಿದ್ದು, ಅಂತಿಮ ಮೊತ್ತ ಇನ್ನೂ ನಿಗದಿಯಾಗಿಲ್ಲ,'' ಎಂದು ಅವರು ಹೇಳಿದರು.

- **ಬೆಂಗಳೂರಿನ ಒಟ್ಟು ರಸ್ತೆ ಜಾಲ 13,873 ಕಿ.ಮೀ.**
- **ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆ: 1344 ಕಿ.ಮೀ.**
- **ವಾರ್ಡ್ ರಸ್ತೆಗಳು: 12,529 ಕಿ.ಮೀ.**
- **ಕಳೆದ 5 ವರ್ಷಗಳಲ್ಲಿ 6767 ಕೋಟಿ ರೂ. ಅನುದಾನದಡಿ 7011.41 ಕಿ.ಮೀ. ಆರ್ಟೀರಿಯಲ್ ಮತ್ತು ವಾರ್ಡ್ ರಸ್ತೆಗಳ ಅಭಿವೃದ್ಧಿ**

### ಟಿ.ಜಿ.ಹಳ್ಳಿ ಹೂಳೆತ್ತುವ ಕಾಮಗಾರಿ ಬಹುತೇಕ ಪೂರ್ಣ

ಸದಸ್ಯ ಎ.ದೇವೇಗೌಡ ಪ್ರಶ್ನೆಗೆ ಉತ್ತರಿಸಿದ ಸಿಎಂ, ''ತಿಪ್ಪಗೊಂಡನಹಳ್ಳಿ ಜಲಾಶಯದಲ್ಲಿ ಹೂಳೆತ್ತಲು ಪೂರ್ಣ ಪ್ರಮಾಣದಲ್ಲಿ ನೀರು ಖಾಲಿ ಮಾಡಿಲ್ಲ. ಸುಮಾರು 30 ಅಡಿ ನೀರಿನಲ್ಲಿ ಹೈಡ್ರಾಲಿಕ್ ತಂತ್ರಜ್ಞಾನದ ಮೂಲಕ ಹೂಳೆತ್ತಲಾಗುತ್ತಿದೆ. ಆ ಕಾಮಗಾರಿ ಇನ್ನೇನು ಮುಕ್ತಾಯವಾಗಲಿದೆ. ಅನಂತರ ಎತ್ತಿನಹೊಳೆಯಿಂದ ಜಲಾಶಯಕ್ಕೆ ನೀರು ಹರಿಸಲಾಗುವುದು. ಬಳಿಕ ಜಲಾಶಯದಿಂದ ಬೆಂಗಳೂರು ಉತ್ತರ ಭಾಗಕ್ಕೆ ಕುಡಿಯುವ ನೀರು ಪೂರೈಸಲಾಗುವುದು,'' ಎಂದರು.

### 11 ಮಂದಿ ರಸ್ತೆ ಗುಂಡಿಗೆ ಬಲಿ

''ಬಿಬಿಎಂಪಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ರಸ್ತೆ ಗುಂಡಿಗಳಿಂದಾಗಿ 12 ಅಪಘಾತಗಳು ಸಂಭವಿಸಿದ್ದು, 11 ಮಂದಿ ಮೃತಪಟ್ಟಿದ್ದಾರೆ ಎಂದು ಬೆಂಗಳೂರು ನಗರ ಸಂಚಾರ ಪೊಲೀಸರ ವರದಿಗಳಿಂದ ತಿಳಿದು ಬಂದಿದೆ. ಆದರೆ, ರಸ್ತೆ ಗುಂಡಿಗಳಿಂದಾಗಿಯೇ ಎಷ್ಟು ಸಾವು ಸಂಭವಿಸಿದೆ ಎಂಬ ಬಗ್ಗೆ ನಿರ್ದಿಷ್ಟ ಮಾಹಿತಿ ಇಲ್ಲ. ಆದರೆ ತನಿಖೆ ಪ್ರಗತಿಯಲ್ಲಿದೆ,'' ಎಂದು ಮುಖ್ಯಮಂತ್ರಿ ಹೇಳಿದರು. ''ಕಳೆದ ಮೂರು ವರ್ಷಗಳಲ್ಲಿ 6371.26 ಕಿ.ಮೀ. ಉದ್ದದ ರಸ್ತೆ ಗುಂಡಿ/ ಹಾಳಾದ ರಸ್ತೆಯನ್ನು ಗುರುತಿಸಲಾಗಿದ್ದು, ಆ ಪೈಕಿ 6343 ಕಿ.ಮೀ. ರಸ್ತೆ ಗುಂಡಿಗಳನ್ನು ದುರಸ್ತಿ ಮಾಡಲಾಗಿದೆ. ಅದಕ್ಕಾಗಿ 125 ಕೋಟಿ ರೂ. ವೆಚ್ಚ ಮಾಡಲಾಗಿದೆ,'' ಎಂದು ಬಸವರಾಜ ಬೊಮ್ಮಾಯಿ ತಿಳಿಸಿದರು.

# ಮೃತ ಬಾಲಕಿಯ ಪಾಲಕರಿಗೆ ಪರಿಹಾರ



**ಹೆಬ್ಬಾಳ:** ಹೆಬ್ಬಾಳದ ಬಳಿ ಪಾಲಿಕೆಯ ಕಸದ ಲಾರಿ ಡಿಕ್ಕಿಯಾಗಿ ಮೃತಪಟ್ಟ ವಿದ್ಯಾರ್ಥಿನಿ ಅಕ್ಷಯಾ ಪಾಲಕರಿಗೆ ಪಾಲಿಕೆಯಿಂದ 5 ಲಕ್ಷ ರೂ ಹಾಗೂ ಸ್ಥಳೀಯ ಶಾಸಕ ಬೈರತಿ ಸುರೇಶ್ ಅವರಿಂದ 3 ಲಕ್ಷ ರೂ. ಸೇರಿ ಒಟ್ಟು 8 ಲಕ್ಷ ರೂ. ಪರಿಹಾರ ಚೆಕ್ ಅನ್ನು ಪಾಲಿಕೆ ಕೇಂದ್ರ ಕಚೇರಿಯಲ್ಲಿ ವಿತರಿಸಲಾಯಿತು. ಪಾಲಿಕೆ ಮುಖ್ಯ ಆಯುಕ್ತ ಗೌರವ್ ಗುಪ್ತ ಬಾಲಕಿಯ ಪಾಲಕರಾದ ತಂದೆ ನರಸಿಂಹಮೂರ್ತಿ ಹಾಗೂ ತಾಯಿ ಗೀತಾರವರಿಗೆ ಪರಿಹಾರದ ಚೆಕ್ ಹಸ್ತಾಂತರಿಸಿದರು. ಚೆಕ್ ವಿತರಣೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, '' ಮೃತ ಬಾಲಕಿಯ ಪೋಷಕರಿಗಿರುವ ಇನ್ನಿಬ್ಬರು ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ ನೀಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು,'' ಎಂದರು. ಲಾರಿ ಮಾಲೀಕರಿಂದಲೂ 2 ಲಕ್ಷ ರೂ. ಪರಿಹಾರ ಕೊಡಿಸುವ ಭರವಸೆ ನೀಡಿದರು. ''ಮೃತ ವಿದ್ಯಾರ್ಥಿನಿ ಕುಟುಂಬಕ್ಕೆ ರಾಜೀವ್‌ಗಾಂಧಿ ವಸತಿ ನಿಗಮದ ವತಿಯಿಂದ ಉಚಿತವಾಗಿ ಮನೆ ನೀಡಲು ಕ್ರಮಗೊಳ್ಳಲಾಗುವುದು,'' ಎಂದು ಶಾಸಕರು ಭರವಸೆ ನೀಡಿದರು.

**ಎಇಇ ಕರ್ತವ್ಯದಿಂದ ಬಿಡುಗಡೆ:** ವಿದ್ಯಾರ್ಥಿನಿ ಸಾವಿನ ಘಟನೆ ಬೆನ್ನಲ್ಲೇ ರಸ್ತೆ, ಮೂಲ ಸೌಕರ್ಯ ಟಿ.ಇ.ಸಿ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಅಶೋಕ ಬಾಗಿ ಅವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ ಆದೇಶ ಹೊರಡಿಸಲಾಗಿದೆ.

# ಬಿಜೆಪಿ ಕಾರ್ಯಕರ್ತರ ಮನೆಯಲ್ಲಿ ಕಂದಾಯ ಅಧಿಕಾರಿಗಳ ಕಾಯಕ

**ಬೆಂಗಳೂರು:** ಜಯನಗರ ಕ್ಷೇತ್ರದ ಬಿಬಿಎಂಪಿ ಕಂದಾಯ ವಿಭಾಗದ ಅಧಿಕಾರಿಗಳು ಕಚೇರಿಯಲ್ಲಿ ಕಾರ್ಯನಿರ್ವಹಿಸದೆ ಬಿಜೆಪಿ ಕಾರ್ಯಕರ್ತರೊಬ್ಬರ ಮನೆಯಲ್ಲಿ ಸೇರಿ ಮತದಾರರ ಪಟ್ಟಿ ಪರಿಷ್ಕರಣೆ ವೇಳೆ ಸಿಕ್ಕಿಬಿದ್ದರೂ ಯಾವುದೇ ಕ್ರಮ ಜರುಗಿಸಿಲ್ಲ. ಹಾಗಾಗಿ ಬಿಬಿಎಂಪಿಯನ್ನು 'ಬೃಹತ್ ಬಿಜೆಪಿ ಮಹಾನಗರ ಪಾಲಿಕೆ' ಎಂದು ಮರುನಾಮಕರಣ ಮಾಡುವುದು ಸೂಕ್ತ ಎಂದು ಕಾಂಗ್ರೆಸ್‌ನ ಸೌಮ್ಯಾ ರೆಡ್ಡಿ ಆಕ್ರೋಶ ಹೊರಹಾಕಿದರು.



ವಿಧಾನಸಭೆಯಲ್ಲಿ ಗುರುವಾರ ಶೂನ್ಯವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ''ಜಯನಗರ ಕ್ಷೇತ್ರದ ಕಂದಾಯ ವಿಭಾಗದ ಕೆಲ ಅಧಿಕಾರಿಗಳು ಬೇರೊಂದು ಕ್ಷೇತ್ರದ ಬಿಜೆಪಿ ಕಾರ್ಯಕರ್ತರ ಮನೆಯಲ್ಲಿ ಸೇರಿ ಗುರುತಿನ ಚೀಟಿ ಪರಿಷ್ಕರಣೆ, ವಾರ್ಡ್ ಪುನರ್‌ವಿಂಗಡಣೆ ಕಾರ್ಯದಲ್ಲಿ ತೊಡಗಿದ್ದರು. ಈ ಬಗ್ಗೆ ವಲಯ ಜಂಟಿ ಆಯುಕ್ತರಿಗೆ ಮಾಹಿತಿ ನೀಡಿ ದಾಳಿ ನಡೆಸಿದಾಗ ಸಿಕ್ಕಿಬಿದ್ದಿದ್ದಾರೆ. ಆದರೂ ಅವರ ಮೇಲೆ ಕ್ರಮ ಜರುಗಿಸಿಲ್ಲ'' ಎಂದು ಬೇಸರ ವ್ಯಕ್ತಪಡಿಸಿದರು. ''ಅಧಿಕಾರಿಗಳು ಒಂದು ಬಾರಿಯಷ್ಟೇ ಸಿಕ್ಕಿಬಿದ್ದಿದ್ದಾರೆಂದು ಪಾಲಿಕೆ ಮುಖ್ಯ ಆಯುಕ್ತರು ಬೇಜವಾಬ್ದಾರಿ ಹೇಳಿಕೆ ನೀಡಿದ್ದಾರೆ. ಮುಖ್ಯ ಆಯುಕ್ತರು ಬಿಜೆಪಿ ಕಾರ್ಯಕರ್ತರಂತೆ ಕೆಲಸ ಮಾಡುತ್ತಿದ್ದಾರೆ,'' ಎಂದು ದೂರಿದರು. ಈ ಬಗ್ಗೆ ಮುಖ್ಯಮಂತ್ರಿಗಳಿಂದ ಉತ್ತರ ಕೊಡಿಸುವುದಾಗಿ ಸಚಿವ ಕೆ.ಎಸ್.ಈಶ್ವರಪ್ಪ ಭರವಸೆ ನೀಡಿದರು.

ವಿಜಯವಾಣಿ
ಕನ್ನಡಿಗರ ಧ್ವನಿ



# ಸೇವೆಯಿಂದ ಇಂಜಿನಿಯರ್ ಬಾಗಿ ಬಿಡುಗಡೆ

**ಬೆಂಗಳೂರು:** ನಗರದಲ್ಲಿ ಪಾದಚಾರಿ ಸುರಂಗ ಮಾರ್ಗಗಳು ಹಾಗೂ ಮೇಲ್ಸೇತುವೆಗಳನ್ನು ನಿರ್ವಹಣೆ ಮಾಡದ ಟಿಇಸಿ ವಿಭಾಗದ ಇಂಜಿನಿಯರ್ ಅಶೋಕ್ ಬಾಗಿ ಅವರನ್ನು ಬಿಬಿಎಂಪಿ ಸೇವೆಯಿಂದ ಬಿಡುಗಡೆ ಮಾಡಲಾಗಿದೆ. ಹೆಬ್ಬಾಳದಲ್ಲಿನ ಪಾದಚಾರಿ ಸುರಂಗ ಮಾರ್ಗವನ್ನು ನಿರ್ವಹಣೆ ಮಾಡದ್ದರಿಂದ ಬಾಲಕಿ ಅಕ್ಷಯಾ ರಸ್ತೆ ದಾಟಲು ಹೋಗಿ ಸಾವು ಸಂಭವಿಸಿತ್ತು. ಇದರಿಂದ ಪಾಲಿಕೆ ಕಾರ್ಯವೈಖರಿಗಳ ಬಗ್ಗೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ಹೀಗಾಗಿ, ಜವಾಬ್ದಾರಿಯುತವಾಗಿ ಕೆಲಸ ಮಾಡದ ಪಾಲಿಕೆಯ ರಸ್ತೆ ಮತ್ತು ಮೂಲ ಸೌಕರ್ಯ ವಿಭಾಗದ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ನ (ಟಿಇಸಿ) ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಅಶೋಕ್ ಬಾಗಿ ಅವರನ್ನು ಪಾಲಿಕೆ ಸೇವೆಯಿಂದ ಬಿಡುಗಡೆಗೊಳಿಸಿ ಮುಖ್ಯ ಆಯುಕ್ತ ಗೌರವ್ ಗುಪ್ತಾ ಆದೇಶಿಸಿದ್ದಾರೆ.

# ದಾಸರಹಳ್ಳಿಗೆ ₹110 ಕೋಟಿ ಬಿಡುಗಡೆ

**ಬೆಂಗಳೂರು:** ನಗರದ ದಾಸರಹಳ್ಳಿ ವಲಯದಲ್ಲಿ ರಸ್ತೆ ನಿರ್ಮಾಣ ಸೇರಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಾಗಿ ಬಿಬಿಎಂಪಿಗೆ 110 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಹೈಕೋರ್ಟ್‌ಗೆ ಸರ್ಕಾರ ಮಾಹಿತಿ ನೀಡಿದೆ. ದಾಸರಹಳ್ಳಿ ವಲಯದಲ್ಲಿನ ಹದಗೆಟ್ಟ ರಸ್ತೆಗಳ ದುರಸ್ತಿಗೆ ಕ್ರಮ ಕೈಗೊಳ್ಳಲು ಪಾಲಿಕೆ ಹಾಗೂ ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ವಕೀಲ ಅಶ್ವತ್ಥ್ ನಾರಾಯಣ ಚೌಧರಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ರಿತುರಾಜ್ ಅವಸ್ಥಿ ನೇತೃತ್ವದ ವಿಭಾಗೀಯ ಪೀಠ ಬುಧವಾರ ವಿಚಾರಣೆ ನಡೆಸಿತು. ಸರ್ಕಾರದ ಪರ ವಕೀಲರು, ಬೆಂಗಳೂರಿನಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ 1,050 ಕೋಟಿ ರೂ. ಗಳನ್ನು 2021ರ ಸೆಪ್ಟೆಂಬರ್‌ನಲ್ಲಿ ಬಿಬಿಂಪಿಗೆ ಬಿಡುಗಡೆ ಮಾಡಲಾಗಿದೆ. ಅದರಲ್ಲಿ ದಾಸರಹಳ್ಳಿ ವಲಯದಲ್ಲಿ ಅಭಿವೃದ್ಧಿ ಕಾಮಗಾರಿಗಾಗಿ 110 ಕೋಟಿ ರೂ. ಬಿಡುಗಡೆ ಮಾಡಿ 2022ರ ಫೆ. 25ರಂದು ಆದೇಶಿಸಲಾಗಿದೆ ಎಂದು ತಿಳಿಸಿದರು. ಅದನ್ನು ದಾಖಲಿಸಿಕೊಂಡ ಪೀಠ, ದಾಸರಹಳ್ಳಿ ವಲಯದಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವುದಕ್ಕೆ ಕಾರ್ಯ ಯೋಜನೆ ರೂಪಿಸಿ ನ್ಯಾಯಾಲಯಕ್ಕೆ ಮಾಹಿತಿ ಒದಗಿಸಲು ಬಿಬಿಎಂಪಿಗೆ 10 ದಿನ ಕಾಲಾವಕಾಶ ನೀಡಿ ವಿಚಾರಣೆಯನ್ನು 2 ವಾರ ಮುಂದೂಡಿತು.

# ನಗರದಲ್ಲಿ 7011 ಕಿ.ಮೀ. ರಸ್ತೆ ಅಭಿವೃದ್ಧಿ

## 6767 ಕೋಟಿ ರೂಪಾಯಿ ವೆಚ್ಚದ ಕಾಮಗಾರಿ | ಸಿಎಂ ಬಸವರಾಜ ಬೊಮ್ಮಾಯಿ ಮಾಹಿತಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ 13,873 ಕಿ.ಮೀ. ರಸ್ತೆ ಜಾಲವಿದ್ದು, ಕಳೆದ 3 ವರ್ಷದಲ್ಲಿ 6767.79 ಕೋಟಿ ರೂ. ಅನುದಾನದಲ್ಲಿ 7011.41 ಕಿ.ಮೀ. ರಸ್ತೆ ದುರಸ್ತಿ ಮತ್ತು ನಿರ್ಮಾಣ ಮಾಡಲಾಗಿದೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ಮೇಲ್ಮನೆಗೆ ತಿಳಿಸಿದರು. 7754 ಕಾಮಗಾರಿಗಳಲ್ಲಿ 4695.23 ಕಿ.ಮೀ. ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಮಾರ್ಚ್ ಅಂತ್ಯಕ್ಕೆ 180 ಕಿ.ಮೀ. ಉದ್ದದ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳ ಡಾಂಬರೀಕರಣ ಮಾಡಲಾಗಿದೆ ಎಂದರು.



**800 ಕೋಟಿ ಟೆಂಡರ್ ರದ್ದು:** 800 ಕೋಟಿ ರೂ. ಅಂದಾಜಿನ ಟೆಂಡರ್‌ನಲ್ಲಿ 400 ಕೋಟಿ ರೂ. ಮುಂದಿನ 5 ವರ್ಷ ನಿರ್ವಹಣೆಗೆ ಎಂದು ಮೀಸಲಿಡಲಾಗಿತ್ತು. ಈ ಕಾರಣಕ್ಕಾಗಿಯೇ ಹಿಂದಿನ ಸಿಎಂ ಈ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದು, ಬಳಿಕ ಟೆಂಡರ್ ರದ್ದು ಮಾಡಲಾಗಿದೆ. ಹೊಸದಾಗಿ ಟೆಂಡರ್ ಕರೆಯಲಾಗುವುದು ಎಂದು ಬೊಮ್ಮಾಯಿ ತಿಳಿಸಿದರು.

**ತನಿಖೆ ಮಾಡಿಸಿ ಕ್ರಮ:** ಎಲ್ಲ ಕೆಲಸಗಳು ಯಾರ ಕಾಲದಲ್ಲಿ ಆಗಿದೆ. ಯಾರು ಯಾವ ಅಧಿಕಾರಿ ಮೇಲೆ ಪ್ರಭಾವ ಬೀರಿದರು ಎಲ್ಲವೂ ಗೊತ್ತಿದೆ. ಎಲ್ಲೆಲ್ಲಿ ಅಕ್ರಮ ಆಗಿದೆ ಎನ್ನುವುದನ್ನು ತನಿಖೆ ನಡೆಸಿ, ಕ್ರಮ ಕೈಗೊಳ್ಳಲಾಗುವುದು. ಇದರಲ್ಲಿ ಯಾರೇ ಇದ್ದರೂ ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆ. ಬಿಬಿಎಂಪಿ ಅಧಿಕಾರಿ, ಯಾವುದೇ ಸಂಸ್ಥೆ ಇದ್ದೂ ಕ್ರಮ ಕೈಗೊಳ್ಳುತ್ತೇವೆ. ಈ ಬಗ್ಗೆ ಅನುಮಾನ ಬೇಡ ಎಂದು ಹೇಳಿದರು.

ಕೆಆರ್‌ಡಿಸಿಎಲ್ ಮತ್ತು ನಿರ್ಮಿತಿ ಕೇಂದ್ರವು ಚಿಕ್ಕಪ್ಪ, ದೊಡ್ಡಪ್ಪ ಮಕ್ಕಳಿದ್ದಂಗೆ. ವಿರೋಧ ಪಕ್ಷದಲ್ಲಿದ್ದಾಗ ಈ ಏಜೆನ್ಸಿಗೆ ಕೆಲಸ ಬೇಡ ಅನ್ನುತ್ತೀವಿ. ಅಧಿಕಾರಕ್ಕೆ ಬಂದಾಗ ಕೊಡ್ತಿವಿ. ಇದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ ಎಂದು ಸಿಎಂ ಹೇಳಿದರು.

### ಗುಂಡಿ ಮುಚ್ಚಲು ಪೈಥಾನ್

**ಬಿಬಿಎಂಪಿ ವ್ಯಾಪ್ತಿಯಲ್ಲಿ ಗುಂಡಿಗಳನ್ನು ಮುಚ್ಚಲು ಪೈಥಾನ್ ಯಂತ್ರ ಮೂಲಕ ಕೆಲಸ ಮಾಡಿಸಲು ನಿರ್ದೇಶನ ಮಾಡಲಾಗಿದೆ. 182 ಕಿ.ಮೀ. ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ಪೈತಾನ್ ಬಳಕೆ ಆಗಲಿದೆ ಎಂದು ಸಿಎಂ ಹೇಳಿದರು.**



ವೈಟ್ ಟಾಪಿಂಗ್ ಪೂರ್ಣಗೊಂಡ ಅರಮನೆ ರಸ್ತೆಯ ಎರಡೂ ಬದಿ ಗುರುವಾರ ವಾಹನಗಳ ಸಂಚಾರ ಕಂಡುಬಂತು.

### ವೈಟ್ ಟಾಪಿಂಗ್ ರದ್ದು

ನಗರದ ಎಲ್ಲ ಕಡೆಯಲ್ಲೂ ವೈಟ್ ಟಾಪಿಂಗ್ ಅಗತ್ಯವಿಲ್ಲ ಎಂದು ಈ ಕಾಮಗಾರಿಗೆ ತಡೆ ನೀಡಲಾಗಿದ್ದು, ಅಗತ್ಯ ಇರುವ ಕಡೆಯಲ್ಲಿ ಮಾತ್ರವೇ ಮಾಡುವಂತೆ ಸೂಚಿಸಲಾಗಿದೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು. 1 ಕಿ.ಮೀ. ವೈಟ್ ಟಾಪಿಂಗ್‌ಗೆ 9-10 ಕೋಟಿ ರೂ. ವೆಚ್ಚವಾಗುವುದು ದುಬಾರಿಯಾಗಿದೆ. 1 ಕೋಟಿಯಲ್ಲಿ 1 ಕಿ.ಮೀ. ರಸ್ತೆ ಮಾಡಬಹುದಾಗಿದೆ. ಆದ್ದರಿಂದ ಎಲ್ಲೆಲ್ಲಿ ಭಾರಿ ವಾಹನಗಳ ಓಡಾಟ ಹೆಚ್ಚಾಗಿದೆ ಅಲ್ಲಿ ಮಾತ್ರ ವೈಟ್ ಟಾಪಿಂಗ್ ಇರಲಿದೆ. ಇನ್ನುಳಿದ ಎಲ್ಲ ಕಡೆಗೂ ಕಡಿವಾಣ ಹಾಕಲಾಗಿದೆ ಎಂದರು.

# ಪ್ಯಾಲೇಸ್ ರಸ್ತೆ ಸಂಚಾರಕ್ಕೆ ಮುಕ್ತ

**ಬೆಂಗಳೂರು:** ನಗರದ ಕೇಂದ್ರ ಭಾಗದಲ್ಲಿನ ಮುಖ್ಯ ರಸ್ತೆಗಳಲ್ಲಿ ಒಂದಾಗಿರುವ ಅರಮನೆ ರಸ್ತೆಯಲ್ಲಿ ಮೂರು ವರ್ಷಗಳಿಂದ ನಡೆಯುತ್ತಿದ್ದ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಂಡಿದ್ದು, ಶುಕ್ರವಾರದಿಂದ (ಮಾ. 25) ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗುತ್ತಿದೆ.

ಅರಮನೆ ರಸ್ತೆ ಉದ್ದ **1.4** ಕಿ.ಮೀ.
ಕಾಮಗಾರಿಗೆ ವೆಚ್ಚ **₹26** ಕೋಟಿ

ಮೈಸೂರು ಬ್ಯಾಂಕ್ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ಸುಮಾರು 1.4 ಕಿ.ಮೀ. ಉದ್ದದ ರಸ್ತೆಯನ್ನು 26 ಕೋಟಿ ರೂ. ವೆಚ್ಚದಲ್ಲಿ ವೈಟ್ ಟಾಪಿಂಗ್ ಮಾಡಲು 2019ರಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿತ್ತು. ಕೋವಿಡ್ ಲಾಕ್‌ಡೌನ್ ಮತ್ತು ಕರ್ಫ್ಯೂ ಜಾರಿ, ಕಾರ್ಮಿಕರ ಕೊರತೆ, ಬೆಸ್ಕಾಂ ಮತ್ತು ಒಎಫ್‌ಸಿ ಕೇಬಲ್ ಅಳವಡಿಕೆ, ಕುಡಿಯುವ ನೀರು ಮತ್ತು ಸ್ಯಾನಿಟರಿ ಪೈಪ್‌ಗಳ ಅಳವಡಿಕೆ, ಮಳೆ ಹಾಗೂ ಸಂಚಾರ ಪೊಲೀಸ್ ಅನುಮತಿ ಮೊದಲಾದ ಕಾರಣಗಳಿಂದ 15 ತಿಂಗಳಲ್ಲಿ ಪೂರ್ಣಗೊಳ್ಳಬೇಕಾದ ಕಾಮಗಾರಿ 3 ವರ್ಷಗಳವರೆಗೆ ನಡೆಯುವಂತಾಯಿತು. ಈಗ ರಸ್ತೆಯ ವಾಹನ ಸಂಚಾರ ಭಾಗ (ಕ್ಯಾರೇಜ್ ವೇ) ಪೂರ್ಣಗೊಂಡಿದೆ. ಹೀಗಾಗಿ, ಗುರುವಾರ ಮಧ್ಯಾಹ್ನದಿಂದ ಪ್ರಾಯೋಗಿಕವಾಗಿ ಎರಡೂ ಬದಿಯ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ ಎಂದು ಪಾಲಿಕೆ ಇಂಜಿನಿಯರ್ ತಿಳಿಸಿದ್ದಾರೆ.

> **ಅರಮನೆ ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ಕ್ಯಾರೇಜ್ ವೇ ಭಾಗ ಪೂರ್ಣಗೊಂಡಿದೆ. ಕೆಲ ಭಾಗದಲ್ಲಿ ಸಿವಿಲ್ ಕೆಲಸಗಳು ಬಾಕಿಯಿದ್ದು, ಮುಂದಿನ 15 ದಿನಗಳಲ್ಲಿ ಎಲ್ಲ ಕೆಲಸ ಮುಕ್ತಾಯಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಲಾಗುತ್ತದೆ.**
>
> | **ಲೋಕೇಶ್** ಬಿಬಿಎಂಪಿ ಯೋಜನಾ ವಿಭಾಗದ ಮುಖ್ಯ ಇಂಜಿನಿಯರ್

**ಸಿವಿಲ್ ಕಾಮಗಾರಿಗಳು ಬಾಕಿ:** ಈ ರಸ್ತೆಯನ್ನು 4 ಭಾಗಗಳಲ್ಲಿ ಅಭಿವೃದ್ಧಿಪಡಿಸಲಾಗಿದೆ. ಈಗ ಮೈಸೂರು ಬ್ಯಾಂಕ್ ವೃತ್ತದಿಂದ ಶೇಷಾದ್ರಿ ರಸ್ತೆಯ ಅಂಡರ್‌ಪಾಸ್‌ವರೆಗೆ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಂಡಿದ್ದು, ರಸ್ತೆ ಇಕ್ಕೆಲಗಳಲ್ಲಿನ ಸಿವಿಲ್ ಕಾಮಗಾರಿ ಬಾಕಿ ಇವೆ. ಪಾದಚಾರಿ ಮಾರ್ಗ, ಕೇಬಲ್ ಮತ್ತು ಡಕ್ಟ್‌ಗಳ ಅಳವಡಿಕೆ, ಗಿಡಗಳನ್ನು ನೆಡುವುದು ಹಾಗೂ ಇತರ ಕಾಮಗಾರಿಗಳು ಬಾಕಿ ಇವೆ. ಅರಮನೆ ಮೈದಾನ ರಸ್ತೆಯಿಂದ ಸ್ವಾತಂತ್ರ್ಯ ಉದ್ಯಾನ ರಸ್ತೆ ಕಡೆಗೆ ಹೋಗುವ ಸ್ಥಳದಲ್ಲಿ ಕಟ್ಟಡ ತ್ಯಾಜ್ಯಗಳನ್ನು ಸುರಿಯಲಾಗಿದ್ದು, ಅದನ್ನು ತೆರವು ಮಾಡಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಬೇಕಿದೆ.



ಪ್ಯಾಲೇಸ್ ರಸ್ತೆಯಲ್ಲಿ ಬಾಕಿ ಉಳಿದ ಸಿವಿಲ್ ಕಾಮಗಾರಿ.

### ನಿರ್ವಹಣಾ ಅವಧಿ ಮುಕ್ತಾಯ?

ಪಾಲಿಕೆಯ ಗುತ್ತಿಗೆ ಕರಾರಿನ ಅನ್ವಯ ನಿಗದಿತ ವೈಟ್ ಟಾಪಿಂಗ್ ರಸ್ತೆಯನ್ನು ಗುತ್ತಿಗೆದಾರರು 15 ತಿಂಗಳಲ್ಲಿ ಪೂರ್ಣಗೊಳಿಸಬೇಕು. ದೋಷದ ಹೊಣೆಗಾರಿಕೆ ಅವಧಿ 2 ವರ್ಷ ಹಾಗೂ ರಸ್ತೆ ನಿರ್ವಹಣಾ ಅವಧಿ 3 ವರ್ಷ ಆಗಿರುತ್ತದೆ. ಆದರೆ ಅರಮನೆ ರಸ್ತೆಯ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಳಿಸಲು 3 ವರ್ಷ ಅವಧಿ ತೆಗೆದುಕೊಂಡಿದ್ದು, ದೋಷ ಹೊಣೆಗಾರಿಕೆ ಮತ್ತು ನಿರ್ವಹಣಾ ಅವಧಿಯೂ ಕಾಮಗಾರಿ ವೇಳೆಯೇ ಪೂರ್ಣಗೊಂಡಂತಾಗಿದೆ. ಹೀಗಾಗಿ, ರಸ್ತೆಯಲ್ಲಿ ಕಾಮಗಾರಿ ಕುರಿತಾಗಿ ಸಮಸ್ಯೆ ಕಂಡುಬಂದಲ್ಲಿ ಯಾರು ಹೊಣೆಗಾರರು ಎಂಬುದು ಯಕ್ಷ ಪ್ರಶ್ನೆಯಾಗಿದೆ.

ವಿಜಯವಾಣಿ
ಕನ್ನಡಿಗರ ಧ್ವನಿ



# ಅಕ್ಷಯಾ ಕುಟುಂಬಕ್ಕೆ ₹10 ಲಕ್ಷ ಪರಿಹಾರ

## ಇಬ್ಬರು ಮಕ್ಕಳಿಗೆ ಉಚಿತ ಶಿಕ್ಷಣ, ಮನೆ ಭರವಸೆ | ₹3 ಲಕ್ಷ ಕೊಟ್ಟ ಶಾಸಕ ಬೈರತಿ ಸುರೇಶ್

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ನಗರದ ಹೆಬ್ಬಾಳದ ಬಸ್ ನಿಲ್ದಾಣದ ಬಳಿ ರಸ್ತೆ ದಾಟುತ್ತಿದ್ದಾಗ ಕಸದ ಲಾರಿ ಡಿಕ್ಕಿ ಹೊಡೆದು ಮೃತಪಟ್ಟ ಅಕ್ಷಯಾ ಕುಟುಂಬಕ್ಕೆ ಗುರುವಾರ 10 ಲಕ್ಷ ರೂ. ಪರಿಹಾರ ಧನದ ಚೆಕ್ ವಿತರಣೆ ಮಾಡಲಾಯಿತು.

ಪಾಲಿಕೆಯಿಂದ 5 ಲಕ್ಷ ರೂ. ಪರಿಹಾರ ನೀಡಲು ಮುಂದಾದಾಗ ಅದನ್ನು ನಿರಾಕರಿಸಿ ಹೆಚ್ಚಿನ ಮೊತ್ತದ ಪರಿಹಾರಕ್ಕೆ ಆಗ್ರಹಿಸಿ ಗುರುವಾರ ಕೇಂದ್ರ ಕಚೇರಿಯಲ್ಲಿ ಪ್ರತಿಭಟನೆಗೆ ಆಗಮಿಸಿದ್ದರು. ಆದರೆ, ಪಾಲಿಕೆ ಮುಖ್ಯ ಆಯುಕ್ತ ಗೌರವ್‌ಗುಪ್ತ ಮತ್ತು ಸ್ಥಳೀಯ ಶಾಸಕ ಬೈರತಿ ಸುರೇಶ್ ನೇತೃತ್ವದಲ್ಲಿ ಸಂತ್ರಸ್ಥ ಕುಟುಂಬದೊಂದಿಗೆ ಚರ್ಚೆ ನಡೆಸಿ 10 ಲಕ್ಷ ರೂ. ಪರಿಹಾರ ಧನ, ಉಳಿದಿಬ್ಬರು ಮಕ್ಕಳಿಗೆ ಶಿಕ್ಷಣಕ್ಕೆ ನೆರವು ಹಾಗೂ ವಸತಿಗೆ ಮನೆ ನಿಡುವುದಾಗಿ ಮನವೊಲಿಸಿದರು. ನಂತರ, ಬಿಬಿಎಂಪಿ 5 ಲಕ್ಷ ರೂ., ಶಾಸಕ ಬೈರತಿ ಸುರೇಶ್ ವೈಯಕ್ತಿಕವಾಗಿ 3 ಲಕ್ಷ ರೂ. ಹಾಗೂ ಲಾರಿ ಮಾಲೀಕರಿಂದ 2 ಲಕ್ಷ ರೂ. ಸೇರಿಸಿ ಒಟ್ಟು 10 ಲಕ್ಷ ರೂ., ಪರಿಹಾರ ಚೆಕ್‌ನ್ನು ಕೆಂದ್ರ ಕಚೇರಿಯಲ್ಲಿ ಸಂತ್ರಸ್ಥ ಕುಟುಂಬಕ್ಕೆ ವಿತರಿಸಲಾಯಿತು. ಬಿಬಿಎಂಪಿ ಮುಖ್ಯಆಯುಕ್ತ ಗೌರವ್ ಗುಪ್ತ ಮಾತನಾಡಿ, ವಿದ್ಯಾರ್ಥಿನಿ ಅಕ್ಷಯಾ ಸಾವು ಆಕಸ್ಮಿಕವಾಗಿದೆ. ಸಾವಿನ ನೋವು ಭರಿಸಲು ಸಾಧ್ಯವಿಲ್ಲ. ಶಾಸಕರ ನೇತೃತ್ವದಲ್ಲಿ ಕುಟುಂಬ ಸದಸ್ಯರೊಂದಿಗೆ ಮಾತುಕತೆ ನಡೆಸಲಾಗಿದೆ. ಪರಿಹಾರ ನೀಡಲಾಗಿದೆ. ಜತೆಗೆ, ಘಟನೆ ನಡೆದಿರುವ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ರಸ್ತೆ ಸುರಕ್ಷತೆಯ ಬಗ್ಗೆ ನಾವು ಮತ್ತಷ್ಟು ಜಾಗ್ರತೆ ವಹಿಸಲಿದ್ದೇವೆ. ಇಂತಹ ಘಟನೆಗಳು ಮುಂದಿನ ದಿನಗಳಲ್ಲಿ ಮರುಕಳಿಸದಂತೆ ಕೈಗೊಳ್ಳಲಾಗುವುದು ಎಂದರು. ಈ ವೇಳೆ ಶಾಸಕ ಬೈರತಿ ಸುರೇಶ್, ವಿಶೇಷ ಆಯುಕ್ತ ಮನೋಜ್ ಜೈನ್, ಪೂರ್ವ ವಲಯ ಜಂಟಿ ಆಯುಕ್ತೆ ಆರ್. ಶಿಲ್ಪಾ, ಬಿಬಿಎಂಪಿ ವಿರೋಧ ಪಕ್ಷದ ಮಾಜಿ ನಾಯಕ ಅಬ್ದುಲ್ ವಾಜೀದ್, ಪಾಲಿಕೆ ಮಾಜಿ ಸದಸ್ಯ ಆನಂದ್ ಕುಮಾರ್ ಮತ್ತಿತರಿದ್ದರು.



ಪಾಲಿಕೆ ಮುಖ್ಯ ಆಯುಕ್ತ ಗೌರವ್ ಗುಪ್ತ, ಶಾಸಕ ಬೈರತಿ ಸುರೇಶ್ ಅವರು ಅಕ್ಷಯಾ ಕುಟುಂಬದವರಿಗೆ ಪರಿಹಾರ ಚೆಕ್ ವಿತರಿಸಿದರು. (ವಿಜಯವಾಣಿ ಚಿತ್ರ)

### ಅಪಘಾತ ವಿಮೆ ಪರಿಹಾರ

ಪಾಲಿಕೆ ನೀಡಲು ಮುಂದಾಗಿದ್ದ 5 ಲಕ್ಷ ರೂ. ಪರಿಹಾರವನ್ನು ನಿರಾಕರಿಸಿದ್ದರಿಂದ ಮುಖ್ಯ ಆಯುಕ್ತರೊಂದಿಗೆ ಚರ್ಚಿಸಿ 10 ಲಕ್ಷ ರೂ. ಪರಿಹಾರ ಕೊಡಿಸಲಾಗಿದೆ. ಅಲ್ಲದೇ ಅಪಘಾತ ವಿಮೆ ಪರಿಹಾರವೂ ಕುಟುಂಬಕ್ಕೆ ಸಿಗಲಿದೆ. ಸರ್ಕಾರದ ರಾಜೀವ್‌ಗಾಂಧಿ ವಸತಿ ಯೋಜನೆಯಡಿ ಮನೆ ನೀಡುವ ಬಗ್ಗೆ ಚರ್ಚೆ ನಡೆಸಲಾಗಿದೆ. ಜತೆಗೆ, ಅವರ ಉಳಿದಿಬ್ಬರ ಮಕ್ಕಳಿಗೆ ಶಿಕ್ಷಣಕ್ಕಾಗಿ ನೆರವು ನಿಡಲಾಗುತ್ತದೆ ಎಂದು ಶಾಸಕ ಬೈರತಿ ಸುರೇಶ್ ತಿಳಿಸಿದರು.

# ಪಾಲಿಕೆ ಆವರಣದಲ್ಲಿ ಪುನೀತ್ ಪುತ್ಥಳಿ



**ಬೆಂಗಳೂರು:** ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರ ಕಂಚಿನ ಪುತ್ಥಳಿಯನ್ನು ಪಾಲಿಕೆ ಕೇಂದ್ರ ಕಚೇರಿಯ ಆವರಣದ ಡಾ.ರಾಜ್‌ಕುಮಾರ್ ಗಾಜಿನ ಮನೆ ಸಮೀಪ ಮಾ. 27ರಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಅನಾವರಣ ಮಾಡಲಿದ್ದಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕನ್ನಡ ನೌಕರರ ಸಂಘದ ವತಿಯಿಂದ ಪುನೀತ್ ರಾಜ್‌ಕುಮಾರ್ ಪುತ್ಥಳಿ ನಿರ್ಮಾಣ ಮಾಡಲಾಗುತ್ತಿದೆ. ಜತೆಗೆ ಗಂಧದಗುಡಿ ಉದ್ಯಾನ ವನ ಕೂಡ ಉದ್ಘಾಟನೆಗೊಳ್ಳಲಿದೆ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಕನ್ನಡ ಸಂಘದ ಪ್ರಧಾನ ಕಾರ್ಯದರ್ಶಿ ಅಮೃತ್‌ರಾಜ್ ಮಾಹಿತಿ ನೀಡಿದ್ದಾರೆ. ಪುನೀತ್ ಅವರ ಹೆಗಲ ಮೇಲೆ ಪಾರಿವಾಳ ಕುಳಿತಿರುವ ಪುತ್ಥಳಿ ಇದಾಗಿದೆ. ಗಂಧದಗುಡಿ ಉದ್ಯಾನವನ 900 ಚದರಡಿಯಲ್ಲಿ 20 ಗಂಧದ ಸಸಿ ನೆಡಲಾಗಿದೆ ಎಂದು ಹೇಳಿದ್ದಾರೆ.

## 109 ಪಾಸಿಟಿವ್ ಪ್ರಕರಣ ದಾಖಲು

**ಬೆಂಗಳೂರು:** ರಾಜ್ಯದಲ್ಲಿ ಗುರುವಾರ 109 ಮಂದಿ ಕೊರೊನಾಗೆ ತುತ್ತಾಗಿದ್ದು, ಅನಾರೋಗ್ಯದಿಂದ ಬಳಲುತ್ತಿದ್ದ ಬೆಂಗಳೂರು ನಗರ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಓರ್ವ ವ್ಯಕ್ತಿ ಕೊರೊನಾದಿಂದ ಮೃತಪಟ್ಟಿದ್ದಾರೆ. ಆ ಮೂಲಕ ಒಟ್ಟು ಮೃತರ ಸಂಖ್ಯೆ 40,044ಕ್ಕೆ ಏರಿಕೆಯಾಗಿದೆ. 117 ಮಂದಿ ಸೋಂಕಿನಿಂದ ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ರಾಜ್ಯಾದ್ಯಂತ 1,792 ಸಕ್ರಿಯ ಪ್ರಕರಣಗಳಿವೆ. ಬೆಂಗಳೂರು ನಗರ 74, ಚಿತ್ರದುರ್ಗ 6, ದ.ಕ. 4, ಉಡುಪಿ 3, ಚಿಕ್ಕಮಗಳೂರು 2, ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು, ಉ.ಕ. ಜಿಲ್ಲೆಯಲ್ಲಿ ತಲಾ ಒಂದು ಪಾಸಿಟಿವ್ ವರದಿಯಾಗಿದೆ.

# ದುಬಾರಿಯಾದ ವೈಟ್‌ಟಾಪಿಂಗ್; ಮರುಚಿಂತನೆ

## ದುಬಾರಿ, ಯುಟಿಲಿಟಿ ಶಿಫ್ಟಿಂಗ್ ಹಿನ್ನೆಲೆ ಕ್ರಮ: ಸಿಎಂ | ಕಿ.ಮೀ. ವೈಟ್‌ಟಾಪಿಂಗ್‌ಗೆ 10 ಕೋಟಿ ರೂ. ವ್ಯಯ

**ವಿಧಾನ ಪರಿಷತ್ತು:** ಸಾಕಷ್ಟು ದುಬಾರಿಯಾಗಿ ಪರಿಣಮಿಸುತ್ತಿರುವ ಹಿನ್ನೆಲೆಯಲ್ಲಿ ನಗರವು ಸೇರಿದಂತೆ ರಾಜ್ಯದ ಇತರೆಡೆ ಭವಿಷ್ಯದಲ್ಲಿ ವೈಟ್ ಟಾಪಿಂಗ್ ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳಲು ಸರ್ಕಾರ ಮರುಚಿಂತನೆ ನಡೆಸಲು ನಿರ್ಧರಿಸಿದೆ.

ಡಾಂಬರು ರಸ್ತೆಗಳಿಗೆ ಹೋಲಿಸಿದರೆ, ವೈಟ್ ಟಾಪಿಂಗ್ ರಸ್ತೆಗಳ ಬಾಳಿಕೆ ಹೆಚ್ಚಿದೆ. ಆದರೆ, ಇದರ ಬೆನ್ನಲ್ಲೇ ಪೈಪ್‌ಲೈನ್‌ಗಳು ಸೇರಿದಂತೆ ರಸ್ತೆಗಳಲ್ಲಿ ಹಾದುಹೋಗಿರುವ ಯುಟಿಲಿಟಿ ಸ್ಥಳಾಂತರದಂತಹ ಸಮಸ್ಯೆಗಳು ಇವೆ. ಜತೆಗೆ ಈ ಮಾದರಿಯ ರಸ್ತೆಗಳು ದುಬಾರಿಯೂ ಆಗಿವೆ. ಈ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲು ಮರುಚಿಂತನೆ ಮಾಡುವ ಅವಶ್ಯಕತೆ ಇದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ವಿಧಾನಮಂಡಲ ಅಧಿವೇಶನ

ಗುರುವಾರ ಪ್ರಶ್ನೋತ್ತರ ವೇಳೆ ಕಾಂಗ್ರೆಸ್‌ನ ಎಸ್. ರವಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಒಂದು ಕಿ.ಮೀ. ವೈಟ್‌ಟಾಪಿಂಗ್‌ಗೆ 10 ಕೋಟಿ ರೂ.ಗಳಿಗಿಂತ ಹೆಚ್ಚು ವೆಚ್ಚ ಆಗುತ್ತದೆ. ಕಳೆದ ಐದು ವರ್ಷಗಳಲ್ಲಿ ಅನೇಕ ಕಡೆ ಈ ವೈಟ್‌ಟಾಪಿಂಗ್ ರಸ್ತೆಗಳನ್ನು ನಿರ್ಮಿಸಲಾಗಿದೆ. ಈ ಸಂದರ್ಭದಲ್ಲಿ ಯುಟಿಲಿಟಿ ಸ್ಥಳಾಂತರದಂತಹ ಹಲವು ಸಮಸ್ಯೆಗಳೂ ಎದುರಾಗಿವೆ. ಇದೆಲ್ಲದರ ದೃಷ್ಟಿಯಿಂದ ಮರುಚಿಂತನೆ ಅವಶ್ಯಕತೆ ಇದೆ ಎಂದು ಹೇಳಿದರು.

ಕಳೆದ ಐದು ವರ್ಷಗಳಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲೇ 100.60 ಕಿ.ಮೀ. ಉದ್ದದ ವೈಟ್‌ಟಾಪಿಂಗ್ ರಸ್ತೆಗಳನ್ನು ನಿರ್ಮಿಸಲಾಗಿದ್ದು, ಇದಕ್ಕಾಗಿ 1,014.30 ಕೋಟಿ ರೂ. ವೆಚ್ಚವಾಗಿದೆ. ಇದು ರಸ್ತೆಯ ತಾಂತ್ರಿಕ ವಿನ್ಯಾಸ, ಅಗಲ, ರಸ್ತೆಯ ಪ್ರಾಮುಖ್ಯತೆ ಆಧಾರದಲ್ಲಿ ಚರಂಡಿ, ಪಾದಚಾರಿ ಮಾರ್ಗ, ಯುಟಿಲಿಟಿ ಸ್ಥಳಾಂತರ ಮತ್ತಿತರ ಅಂಶಗಳನ್ನು ಒಳಗೊಂಡಿದೆ ಎಂದು ಹೇಳಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಲ್ಲಿ ವೈಟ್‌ಟಾಪಿಂಗ್ ಹೊರತುಪಡಿಸಿ 19,11.14 ಕಿ.ಮೀ. ಉದ್ದದ ಹೊಸ ರಸ್ತೆಗಳನ್ನು ನಿರ್ಮಿಸಲಾಗಿದೆ. ಇದಕ್ಕಾಗಿ 1,449.63 ಕೋಟಿ ರೂ. ಖರ್ಚಾಗಿದೆ. ಇದೇ ಅವಧಿಯಲ್ಲಿ 6,163.47 ಕಿ.ಮೀ. ಉದ್ದದ ರಸ್ತೆಗಳ ನಿರ್ವಹಣೆ/ ಮರುಡಾಂಬರೀಕರಣ ಮಾಡಲಾಗಿದೆ. ಈ ಉದ್ದೇಶಕ್ಕಾಗಿ ಆಗಿರುವ ವೆಚ್ಚ 4,110.05 ಕೋಟಿ ರೂ. ಆಗಿದೆ. ಇನ್ನು ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ 6,371.26 ಕಿ.ಮೀ. ರಸ್ತೆಗಳಲ್ಲಿ ರಸ್ತೆಗುಂಡಿ/ ಹಾಳಾದ ರಸ್ತೆ ಮೇಲ್ಮೈಯನ್ನು ಗುರುತಿಸಲಾಗಿದ್ದು, ಈ ಪೈಕಿ 6,343.05 ಕಿ.ಮೀ. ಉದ್ದದ ರಸ್ತೆಯನ್ನು ದುರಸ್ತಿಪಡಿಸಲಾಗಿದೆ. ಇದಕ್ಕಾಗಿ ತಗುಲಿರುವ ವೆಚ್ಚ 125.04 ಕೋಟಿ ರೂ. ಎಂದು ಮುಖ್ಯಮಂತ್ರಿಗಳು ಮಾಹಿತಿ ನೀಡಿದರು.

ಮೂಲಗಳ ಪ್ರಕಾರ ಸಾಮಾನ್ಯವಾಗಿ ಡಾಂಬರು ರಸ್ತೆಗೆ ಪ್ರತಿ ಕಿ.ಮೀ.ಗೆ 5 ಕೋಟಿ ರೂ. ಖರ್ಚು ಆಗುತ್ತದೆ. ಇವುಗಳ ಬಾಳಿಕೆ ಐದು ವರ್ಷ. ಈ ಮಧ್ಯೆ ಗುಂಡಿ ಬೀಳುವುದು, ಯುಟಿಲಿಟಿ ಶಿಫ್ಟಿಂಗ್‌ಗಾಗಿ ರಸ್ತೆ ಅಗೆಯುವುದು ಮತ್ತು ಅದರ ನಿರ್ವಹಣೆ ನಿರಂತರವಾಗಿರುತ್ತದೆ. ವೈಟ್‌ಟಾಪಿಂಗ್ ರಸ್ತೆಗಳ ಬಾಳಿಕೆ ಇದರ ನಾಲ್ಕುಪಟ್ಟು ಅಂದರೆ 20 ವರ್ಷವಾಗಿದೆ.



ವಿಧಾನಪರಿಷತ್‌ನಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿದರು.

### ಮೂರು ವರ್ಷದಲ್ಲಿ ರಸ್ತೆ ಗುಂಡಿಗೆ 11 ಮಂದಿ ಸಾವು

ಮೂರು ವರ್ಷದಲ್ಲಿ ರಸ್ತೆ ಗುಂಡಿಗಳಿಗೆ 11 ಜನ ಬಲಿಯಾಗಿದ್ದಾರೆ. ಇದನ್ನು ಸ್ವತಃ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಖಚಿತಪಡಿಸಿದರು. ಪ್ರಶ್ನೋತ್ತರ ವೇಳೆ ಕಾಂಗ್ರೆಸ್‌ನ ಎಸ್. ರವಿ ಕೇಳಿದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಅವರು, ಮೂರು ವರ್ಷಗಳಲ್ಲಿ 12 ರಸ್ತೆ ಅಪಘಾತಗಳು ಸಂಭವಿಸಿದ್ದು, ಪ್ರಥಮ ವರ್ತಮಾನ ವರದಿ ಪ್ರಕಾರ 11 ಮಂದಿ ಮೃತಪಟ್ಟಿದ್ದಾರೆ ಎಂದು ತಿಳಿಸಿದ್ದಾರೆ. ಆದರೆ, ಇವುಗಳಲ್ಲಿ ನಿರ್ದಿಷ್ಟವಾಗಿ ಎಷ್ಟು ಸಾವುಗಳು ರಸ್ತೆಗುಂಡಿಗಳಿಂದ ಸಂಭವಿಸಿವೆ ಎಂಬುದರ ಕುರಿತು ತನಿಖೆ ಪ್ರಗತಿಯಲ್ಲಿದೆ. ಅಂತಿಮ ತನಿಖಾ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ ನಂತರ ಅಂತಿಮ ತೀರ್ಪು ಬರಲಿದೆ ಎಂದೂ ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

### ರೋಡ್ ನಿರ್ವಹಣೆಗೆ ಬರಲಿದೆ ಕೋಡ್!

**ವಿಧಾನ ಪರಿಷತ್ತು:** ನಗರದ ರಸ್ತೆಗಳ ನಿರ್ವಹಣೆಗಾಗಿಯೇ ವಿಶೇಷ ಸಂಹಿತೆ (ಕೋಡ್) ರೂಪಿಸಲು ಸರ್ಕಾರ ನಿರ್ಧರಿಸಿದೆ. ಅದರಡಿ ಮುಂಬರುವ ದಿನಗಳಲ್ಲಿ ಕಾಮಗಾರಿ ಸೇರಿದಂತೆ ರಸ್ತೆಗಳಿಗೆ ಸಂಬಂಧಪಟ್ಟ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಪ್ರಶ್ನೋತ್ತರ ವೇಳೆ ಕಾಂಗ್ರೆಸ್‌ನ ಎಸ್. ರವಿ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ರಸ್ತೆ ನಿರ್ವಹಣೆ ಬಗ್ಗೆ ಹಲವು ಪ್ರಶ್ನೆಗಳು ಬರುತ್ತಿವೆ. ಪ್ರತಿ ಬಾರಿ ಹೊಸ ಸವಾಲುಗಳು ಎದುರಾಗುತ್ತಿವೆ. ಈ ಹಿನ್ನೆಲೆಯಲ್ಲಿ ರಸ್ತೆಗಳ ನಿರ್ವಹಣೆಗಾಗಿಯೇ ವಿಶೇಷ ಕೋಡ್ ರೂಪಿಸಲು ನಿರ್ಧರಿಸಲಾಗಿದೆ' ಎಂದು ಹೇಳಿದರು.

ಅತಿಹೆಚ್ಚು ದಟ್ಟಣೆವುಳ್ಳ ರಸ್ತೆಗಳು ಮತ್ತು ಅಲ್ಲಿ ಸಂಚರಿಸುವ ವಾಹನಗಳು ಎಷ್ಟು? ವೈಟ್‌ಟಾಪಿಂಗ್ ಎಲ್ಲೆಲ್ಲಿ ಅವಶ್ಯಕತೆ ಇದೆ? ಎಲ್ಲಿ ಡಾಂಬರೀಕರಣ ಆಗಬೇಕು? ಎಲ್ಲೆಲ್ಲಿ ಮಲ್ಟಿಎಕ್ಸೆಲ್ ವಾಹನಗಳು ಸಂಚರಿಸುತ್ತವೆ? ಇಂತಹ ಹಲವು ಅಂಶಗಳನ್ನು ಆಧರಿಸಿ ಕೋಡ್ ರೂಪಿಸಲಾಗುವುದು. ಮುಂಬರುವ ದಿನಗಳಲ್ಲಿ ಆ ಕೋಡ್ ಆಧಾರದಲ್ಲೇ ಕಾಮಗಾರಿಗಳು ಮತ್ತಿತರ ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

### ಗುತ್ತಿಗೆದಾರರ ಲೆಕ್ಕಕ್ಕೆ ಬೊಮ್ಮಾಯಿ ತಬ್ಬಿಬ್ಬು!

ಇದು ಮೂಗಿಗಿಂತ ಮೂಗುತಿಯೇ ಭಾರವಾದ ಕಥೆ. ನಗರದ 12 ಅತಿಹೆಚ್ಚು ದಟ್ಟಣೆವುಳ್ಳ ರಸ್ತೆಗಳ ವಿಚಾರದಲ್ಲಿ ಗುತ್ತಿಗೆದಾರರು ನೀಡಿದ ಈ ಲೆಕ್ಕಕ್ಕೆ ಮುಖ್ಯಮಂತ್ರಿಗಳೇ ತಬ್ಬಿಬ್ಬಾಗಿ, ಕೊನೆಗೆ ಆ ಟೆಂಡರ್ ಅನ್ನು ರದ್ದುಗೊಳಿಸಿದ್ದಾರೆ. ಸ್ವತಃ ಮುಖ್ಯಮಂತ್ರಿ ಇದನ್ನು ಬಹಿರಂಗಪಡಿಸಿದರು. 12 ಹೈಡೆನ್ಸಿಟಿ ಕಾರಿಡಾರ್‌ಗಳ ನಿರ್ಮಾಣಕ್ಕೆ ಸಂಬಂಧಿಸಿದ ಟೆಂಡರ್ ಅನ್ನು ಸತತ ಎರಡು ಬಾರಿ ರದ್ದುಪಡಿಸಲಾಗಿದೆ. ಇದಕ್ಕೆ ಏನು ಕಾರಣ ಎಂದು ಕಾಂಗ್ರೆಸ್‌ನ ರವಿ ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, 'ಗುತ್ತಿಗೆದಾರರು ಆ ರಸ್ತೆಗಳ ನಿರ್ಮಾಣಕ್ಕೆ 350 ಕೋಟಿ ರೂ. ಕೋಟ್ ಮಾಡಿದ್ದರೆ, ಅವುಗಳ ಐದು ವರ್ಷಗಳ ನಿರ್ವಹಣೆಗೆ 530 ಕೋಟಿ ರೂ. ಕೋಟ್ ಮಾಡಿದ್ದರು. ಇದು ಸರಿ ಅಲ್ಲ ಎಂದು ರದ್ದುಗೊಳಿಸಿದೆ' ಎಂದು ಹೇಳಿದರು.

# ರಸ್ತೆ ನಿರ್ವಹಣೆಗೆ ವಿಶೇಷ ಕೋಡ್: ಸಿಎಂ ಭರವಸೆ

**ವಿಧಾನಪರಿಷತ್:** ಬೆಂಗಳೂರಿನ ಸಮಗ್ರ ರಸ್ತೆ ನಿರ್ವಹಣೆ ಮತ್ತು ಸುಧಾರಣೆಗಾಗಿ ವಿಶೇಷ ಕೋಡ್‌ಗಳನ್ನು ರಚಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಎಸ್.ರವಿ ವಿಷಯ ಪ್ರಸ್ತಾಪಿಸಿ, ಬೆಂಗಳೂರಿನ ರಸ್ತೆ ಗುಂಡಿಗಳಿಂದ 11 ಜನ ಮೃತಪಟ್ಟಿದ್ದಾರೆ. ರಸ್ತೆ ಗುಂಡಿ ಮುಚ್ಚಲು ಅಗತ್ಯವಾದ ಪೈಥಾನ್ ಯಂತ್ರ ಖರೀದಿಸಲು ಸರಕಾರಕ್ಕೆ ಏನು ತೊಂದರೆ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಮುಖ್ಯಮಂತ್ರಿ, ಇನ್ನೂ ಮುಂದೆ ರಸ್ತೆ ನಿರ್ವಹಣೆ, ವೈಟ್ ಟ್ಯಾಪಿಂಗ್, ಆಸ್ಪಾಲ್ಟ್ ಸೇರಿದಂತೆ ಯಾವ ಯೋಜನೆಗಳನ್ನು ಜಾರಿ ಮಾಡಬೇಕು ಎಂಬುದನ್ನು ನಿರ್ಧರಿಸಲು ಹೊಸ ಕೋಡ್‌ನ ವ್ಯವಸ್ಥೆ ಜಾರಿ ಮಾಡಲಾಗುವುದು. ಸಾಮಾನ್ಯ ಅಸ್ಪಾಲ್ಟಿಂಗ್ ಮಾಡಿದರೆ ಕಡಿಮೆ ವೆಚ್ಚವಾಗಲಿದೆ. ವೈಟ್ ಟ್ಯಾಂಪಿಂಗ್ ಮಾಡಿದರೆ ವೆಚ್ಚ 10 ಪಟ್ಟು ಹೆಚ್ಚಾಗಲಿದೆ. ಹಾಗಾಗಿ ವೈಟ್ ಟ್ಯಾಪಿಂಗ್ ಯೋಜನೆಗಳ ಅಗತ್ಯದ ಬಗ್ಗೆ ಮರು ಚಿಂತನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಖಾಸಗಿವರಿಂದ ಪೈಥಾನ್ ಯಂತ್ರವನ್ನು ಬಾಡಿಗೆ ಪಡೆದು 182 ಕಿ.ಮೀ. ರಸ್ತೆಯಲ್ಲಿ ಗುಂಡಿ ಮುಚ್ಚಿಸಲಾಗುತ್ತಿದೆ. 442 ಕಿ.ಮೀ. ರಸ್ತೆಯಲ್ಲೂ ಗುಂಡಿ ಮುಚ್ಚಲು ಸೂಚಿಸಲಾಗಿದೆ ಎಂದರು.

# ಬೆಂಗಳೂರು ರಸ್ತೆ ಅಭಿವೃದ್ಧಿ, ನಿರ್ವಹಣೆಗೆ 6767 ಕೋಟಿ

**ವಿಧಾನಪರಿಷತ್:** ಕಳೆದ ಮೂರು ವರ್ಷದಲ್ಲಿ ನಗರದ ರಸ್ತೆ ಅಭಿವೃದ್ಧಿ ಮತ್ತು ನಿರ್ಮಾಣ ಕಾಮಗಾರಿಗಳಿಗೆ 6767.79 ಕೋಟಿ ರು. ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಸದಸ್ಯ ಡಾ.ಕೆ.ಗೋವಿಂದರಾಜು ಪ್ರಶ್ನೆಗೆ ಉತ್ತರಿಸಿ, 2018-19ರಲ್ಲಿ 1080 ಕೋಟಿ ರು., 2019-20ನೇ ಸಾಲಿನಲ್ಲಿ 4494 ಕೋಟಿ ರು., 2020-21ನೇ ಸಾಲಿನಲ್ಲಿ 1193 ಕೋಟಿ ರು. ಒದಗಿಸಲಾಗಿದೆ. 3665 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. 800 ಚದರ ಕಿಲೋ ಮೀಟರ್ ವಿಸ್ತೀರ್ಣದ ಬೆಂಗಳೂರಿನಲ್ಲಿ 13,873 ಕಿಲೋ ಮೀಟರ್ ಉದ್ದದ ರಸ್ತೆಗಳ ಜಾಲವಿದೆ ಎಂದು ಹೇಳಿದರು.

ಕಾಮಗಾರಿಗಳನ್ನು ಕೆಆರ್‌ಐಡಿಎಲ್‌ಗೆ ನೀಡುತ್ತಿರುವುದರಿಂದ ಗುಣಮಟ್ಟ ಹದಗೆಡುತ್ತಿರುವ ಬಗ್ಗೆ ಸದಸ್ಯರು ಆಕ್ಷೇಪ ವ್ಯಕ್ತ ಪಡಿಸಿದರು. ಇದಕ್ಕೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ, ಕೆಆರ್‌ಐಡಿಎಲ್ ಸಂಸ್ಥೆಗೆ ಕೆಲಸ ನೀಡುವುದನ್ನು ನಾವು ಅಧಿಕಾರಕ್ಕೆ ಬಂದ ಮೇಲೆ ನಿಲ್ಲಿಸಿದ್ದೇವೆ. ತಾವು ಪ್ರಗತಿ ಪರಿಶೀಲನೆ ನಡೆಸಿದಾಗ ಕೆಆರ್‌ಐ ಡಿಎಲ್ ಸಂಸ್ಥೆಯ ಕೆಲಸದ ಗುಣಮಟ್ಟ ಸರಿ ಇಲ್ಲ ಎಂದು ಮನವರಿಕೆಯಾಗಿದೆ. ಅದಕ್ಕಾಗಿ ಕೆಲವು ಟೆಂಡರ್‌ರದ್ದು ಗೊಳಿಸಲಾಗಿದೆ. ಬಾಕಿ ಇರುವ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಎಂದರು.

# ಅಕ್ಷಯಾ ಕುಟುಂಬಕ್ಕೆ 10 ಲಕ್ಷ ಪರಿಹಾರ

**ಬೆಂಗಳೂರು:** ಬಿಬಿಎಂಪಿ ಕಸದ ಲಾರಿ ಹರಿದು ಮೃತಪಟ್ಟ ಬಾಲಕಿ ಅಕ್ಷಯಾ ಕುಟುಂಬಕ್ಕೆ 10 ಲಕ್ಷ ರು. ಪರಿಹಾರ ವಿತರಿಸಲಾಯಿತು. ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತ, ಶಾಸಕ ಬೈರತಿ ಸುರೇಶ್, ಪಾಲಿಕೆ ಪ್ರತಿಪಕ್ಷದ ಮಾಜಿ ನಾಯಕ ಅಬ್ದುಲ್ ವಾಜೀದ್ ಸೇರಿ ಪ್ರಮುಖರು ಬಾಲಕಿಯ ಕಟುಂಬಕ್ಕೆ 10 ಲಕ್ಷ ರು.ನ ಚೆಕ್ ಹಸ್ತಾಂತರ ಮಾಡಿದರು. ಇದರ ಜತೆಗೆ ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ಬಿಬಿಎಂಪಿ ಯಿಂದ ಮನೆ ನೀಡಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮೃತ ಬಾಲಕಿಯ ಪೋಷಕರಾದ ನರಸಿಂಹಮೂರ್ತಿ ಹಾಗೂ ಗೀತಾ ಇದ್ದರು. ಮಾ.21ರಂದು ಹೆಬ್ಬಾಳದ ಬಳಿ ಬಿಬಿಎಂಪಿ ಕಸದ ಲಾರಿ ಹರಿದು ಬಾಲಕಿ ಅಕ್ಷಯಾ ಸಾವನ್ನಪ್ಪಿದ್ದಳು. ಹೀಗಾಗಿ ಇಂದು ಅಕ್ಷಯಾ ಕುಟುಂಬಸ್ಥರಿಗೆ ಬಿಬಿಎಂಪಿ ಐದು ಲಕ್ಷ, ಶಾಸಕ ಬೈರತಿ ಸುರೇಶ್ 3 ಲಕ್ಷ, ಲಾರಿ ಮಾಲೀಕ 2 ಲಕ್ಷ ಸೇರಿ ಒಟ್ಟು 10 ಲಕ್ಷ ರು. ಪರಿಹಾರದ ಚೆಕ್ ನೀಡಿದರು. ಈ ಕುರಿತು ಶಾಸಕ ಬೈರತಿ ಸುರೇಶ್ ಪ್ರತಿಕ್ರಿಯಿಸಿ, ವಿದ್ಯಾರ್ಥಿನಿ ಅಕ್ಷಯಾ ಅಪಘಾತಕ್ಕೆ ಸಂಬಂಧಿಸಿದಂತೆ ನಿನ್ನೆ ಆಯುಕ್ತರು ಮನೆಗೆ ಭೇಟಿ ನೀಡಿ 5 ಲಕ್ಷ ಪರಿಹಾರ ಘೋಷಿಸಿದರು. ಆದರೆ ಅಕ್ಷಾಯ ಅವರ ಕುಟುಂಬ ಬಹಳ ಬಡ ಕುಟುಂಬ ವಾಗಿದ್ದು ಮತ್ತಷ್ಟು ಸಹಾಯದ ಅವಶ್ಯಕತೆ ಅವರಿಗೆ ಇದೆ ಎಂದು ತಿಳಿಸಿದರು.

# ಪುನಿತ್ ಪುತ್ಥಳಿ ಸ್ಥಾಪನೆ, ಪ್ರಶಸ್ತಿ ಪ್ರದಾನ ಸಮಾರಂಭ 27ಕ್ಕೆ

**ಬೆಂಗಳೂರು:** ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿ ಪುನಿತ್ ರಾಜ್‌ಕುಮಾರ್ ಅವರ ಪುತ್ಥಳಿ ಮಾ. 27ರಂದು ಸ್ಥಾಪನೆಯಾಗಲಿದೆ. ಬಿಬಿಎಂಪಿ ನೌಕರರ ಸಂಘ ಪ್ರತಿಷ್ಠಾಪಿಸುತ್ತಿರುವ ಈ ಪುತ್ಥಳಿಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಲೋಕಾರ್ಪಣೆ ಮಾಡಲಿದ್ದಾರೆ.



ಬಿಬಿಎಂಪಿ ಆವರಣದಲ್ಲಿರುವ ಗಾಜಿನ ಮನೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಗಂಧದ ಗುಡಿ ಉದ್ಯಾನವನ ಉದ್ಘಾಟನೆ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಡಾ. ಪುನೀತ್ ರಾಜ್‌ಕುಮಾರ್ ಪ್ರಶಸ್ತಿ ಪ್ರದಾನ ಕಾರ್ಯ ಕ್ರಮ ಹಮ್ಮಿಕೊಂಡಿರುವುದಾಗಿ ಸಂಘ ತಿಳಿಸಿದೆ. ನಟ ಶ್ರೀನಾಥ್, ನಟಿ ತಾರಾ, ನಿರ್ದೇಶಕ ಎಸ್.ಕೆ.ಭಗವಾನ್, ಸಿಸಿಬಿ ಎಸಿಪಿ ಎಚ್.ಎಸ್.ಪರಮೇಶ್ವರ್, ಸಾಹಿತಿ ಮರುಳಸಿದ್ದಪ್ಪ, ಮಾಜಿ ಸಚಿವೆ ಬಿ.ಟಿ.ಲಲಿತಾ ನಾಯಕ್, ಸುದ್ದಿ ನಿರೂಪಕ ರಂಗನಾಥ್ ಭಾರದ್ವಾಜ್, ಜಯಪ್ರಕಾಶ್ ಶೆಟ್ಟಿ, ಹಿರಿಯ ಪತ್ರಕರ್ತ ಆರ್.ಪಿ.ಜಗದೀಶ್, ನೇತ್ರತಜ್ಞ ಡಾ.ರಂಗಸ್ವಾಮಿ, ಗಾಯಕರಾದ ವಿಜಯ ಪ್ರಕಾಶ್, ರಮ್ಯಾ ವಸಿಷ್ಠ, ಹಾಸ್ಯನಟ ಹೊನ್ನವಳ್ಳಿ ಕೃಷ್ಣ ಹಾಗೂ ಡಾ.ರಾಜ್ ಕುಟುಂಬದ ಆಪ್ತ ಚನ್ನ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಹೊಸ ದಿಗಂತ

14
25 Mar 2022

## ಮೂರು ವರ್ಷದಲ್ಲಿ ರಸ್ತೆ ಅಭಿವೃದ್ಧಿಗೆ ₹6767 ಕೋಟಿ ಬಳಕೆ | ಸದ್ಯ 3665 ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ

# ಬೆಂಗಳೂರಲ್ಲಿ ಗುಣಮಟ್ಟದ ರಸ್ತೆ ನಿರ್ಮಾಣ

**ವಿಧಾನ ಪರಿಷತ್:** ಕಳೆದ ಮೂರು ವರ್ಷದಲ್ಲಿ ನಗರದ ರಸ್ತೆ ಅಭಿವೃದ್ಧಿ ಮತ್ತು ನಿರ್ಮಾಣ ಕಾಮಗಾರಿಗಳಿಗೆ 6767.79 ಕೋಟಿ ರೂ. ನೀಡಲಾಗಿದೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು.

ಕಾಂಗ್ರೆಸ್ ಸದಸ್ಯ ಡಾ.ಕೆ.ಗೋವಿಂದರಾಜು ಪ್ರಶ್ನೆಗೆ ಉತ್ತರಿಸಿದ ಸಿಎಂ, 2018-19ರಲ್ಲಿ 1080 ಕೋಟಿ, 2019-20ನೇ ಸಾಲಿನಲ್ಲಿ 4494 ಕೋಟಿ, 2020-21ನೇ ಸಾಲಿನಲ್ಲಿ 1193 ಕೋಟಿ ರೂಪಾಯಿಗಳನ್ನು ನೀಡಲಾಗಿದೆ. ಇದರಡಿ 3665 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. 800 ಚದುರ ಕಿಲೋ ಮೀಟರ್ ವಿಸ್ತೀರ್ಣದ ಬೆಂಗಳೂರಿನಲ್ಲಿ 13,873 ಕಿಲೋ ಮೀಟರ್ ಉದ್ದದ ರಸ್ತೆಗಳಿವೆ ಎಂದು ತಿಳಿಸಿದರು.

ಈ ವೇಳೆ ಕಾಮಗಾರಿಗಳನ್ನು ಕೆಆರ್‌ಐಡಿಎಲ್ ನೀಡುತ್ತಿರುವುದರಿಂದ ಗುಣಮಟ್ಟ ಹದಗೆಡುತ್ತಿರುವ ಬಗ್ಗೆ ಸದಸ್ಯರು ಆಕ್ಷೇಪ ವ್ಯಕ್ತ ಪಡಿಸಿದರು. ಇದಕ್ಕೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿಯವರು, ಕೆಆರ್‌ಐಡಿಎಲ್ ಸಂಸ್ಥೆಗೆ ಕೆಲಸ ನೀಡುವುದನ್ನು ನಾವು ಅಧಿಕಾರಕ್ಕೆ ಬಂದ ಮೇಲೆ ನಿಲ್ಲಿಸಿದ್ದೇವೆ. ಪ್ರತಿಪಕ್ಷದಲ್ಲಿದ್ದಾಗ ಆ ಸಂಸ್ಥೆಗೆ ಕೆಲಸ ನೀಡಬಾರದು ಎನ್ನುವುದು, ಅಧಿಕಾರಕ್ಕೆ ಬಂದ ಬಳಿಕ ಅದೇ ಸಂಸ್ಥೆಗೆ ಕೆಲಸ ನೀಡಿ ತಮಗೆ ಬೇಕಾದಂತೆ ಬಳಕೆ ಮಾಡಿಕೊಳ್ಳುವುದನ್ನು ಈ ಮೊದಲು ಕಂಡು ಬಂದಿತ್ತು. ತಾವು ಪ್ರಗತಿ ಪರಿಶೀಲನೆ ನಡೆಸಿದಾಗ ಕೆಆರ್‌ಐಡಿಎಲ್ ಸಂಸ್ಥೆಯ ಕೆಲಸದ ಗುಣಮಟ್ಟ ಸರಿ ಇಲ್ಲ ಎಂದು ಮನವರಿಕೆಯಾಗಿದೆ. ಅದಕ್ಕಾಗಿ ಕೆಲವು ಟೆಂಡರ್ ಅನ್ನು ರದ್ದು ಗೊಳಿಸಲಾಗಿದೆ. ಪ್ರಗತಿಯಲ್ಲಿರುವ ಬಾಕಿ ಇರುವ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಹಾಗು ಗುಣಮಟ್ಟ ಸುಧಾರಿಸಲು ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಬಿಬಿಎಂಪಿಯಿಂದಲೇ ಕೆಲಸ ಮಾಡಿಸುವುದಾಗಿ ಭರವಸೆ ನೀಡಿದರು.

ಬೆಂಗಳೂರಿನಲ್ಲಿ 7011 ಕಿ.ಮೀ. ರಸ್ತೆಯನ್ನು 6767 ಕೋಟಿ ರೂ. ಖರ್ಚು ಮಾಡಿ ಅಭಿವೃದ್ಧಿ ಪಡಿಸಲಾಗುತ್ತಿದೆ. 4761 ಕೆಲಸಗಳು ಪ್ರಗತಿಯಲ್ಲಿವೆ. ಕಾವೇರಿ ನೀರು ಪೂರೈಸುವ ಕೊಳವೆ ಮಾರ್ಗದಲ್ಲಿ ರಸ್ತೆ ಕುಸಿದಿರುವುದನ್ನು ದುರಸ್ತಿ ಮಾಡಲು ಹೆಚ್ಚಿನ ಅನುದಾನ ನೀಡಲಾಗುವುದು ಎಂದು ತಿಳಿಸಿದರು.



### ಕಾಲ ಕಾಲಕ್ಕೆ ಸಿಬ್ಬಂದಿಯ ನೇಮಕ

ಮೆಟ್ರೋ ರೈಲಿನ ನಿರ್ವಹಣೆಗೆ ಅಗತ್ಯವಾದ ಸಿಬ್ಬಂದಿಗಳನ್ನು ಕಾಲ ಕಾಲಕ್ಕೆ ನೇಮಿಸಿಕೊಳ್ಳಲಾಗುವುದು ಎಂದು ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು. ಜೆಡಿಎಸ್ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಪ್ರಶ್ನೆಗೆ ಉತ್ತರಿಸಿ, 2019ರಲ್ಲಿ ನಮ್ಮ ಮೆಟ್ರೋದಲ್ಲಿ 174 ಮಂದಿ ನಿರ್ವಹಣಾಧಿಕಾರಿ ಸೇರಿ ಹಲವು ಹುದ್ದೆಗಳಿಗೆ ನೇಮಕಾತಿ ನಡೆಸಲು ಅರ್ಜಿ ಆಹ್ವಾನಿಸಲಾಯಿತು. 38,344 ಸಾವಿರ ಅರ್ಜಿಗಳು ಬಂದಿದ್ದವು. ಕೋವಿಡ್ ನಿಂದ ಕಾರ್ಯಾಚರಣೆ ಇಲ್ಲದೆ ಮೆಟ್ರೋಗೆ ನಷ್ಟವಾದ್ದರಿಂದ ನೇಮಕಾತಿ ಅಧಿಸೂಚನೆ ರದ್ದುಗೊಳಿಸಲಾಗಿತ್ತು. ಆರ್ಥಿಕ ಪರಿಸ್ಥಿತಿ ಆಧರಿಸಿ ಅಗತ್ಯ ಸಿಬ್ಬಂದಿಗಳ ನೇಮಕಾತಿಗೆ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

### ರಸ್ತೆ ಅಭಿವೃದ್ಧಿಗೆ ವಿಶೇಷ ಕೋಡ್

ವಿಧಾನ ಪರಿಷತ್: ಬೆಂಗಳೂರಿನ ಸಮಗ್ರ ರಸ್ತೆ ಸುಧಾರಣೆ-ನಿರ್ವಹಣೆಗಾಗಿ ವಿಶೇಷ ರಸ್ತೆ ಕೋಡ್ ಜಾರಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಕಾಂಗ್ರೆಸ್ ಸದಸ್ಯ ಎಸ್.ರವಿ ಪ್ರಶ್ನೆಗೆ ಉತ್ತರಿಸಿದ ಸಿಎಂ, ನಗರದ ರಸ್ತೆಗಳಿಗೆ ಸಂಬಂಧಿಸಿದಂತೆ ಪರಿಹಾರ ಕಂಡುಕೊಳ್ಳುವುದು, ರಸ್ತೆಗಳ ದುರಸ್ತಿ, ಹೊಸ ರಸ್ತೆ ನಿರ್ಮಾಣ, ಎಲ್ಲೆಲ್ಲಿ ವೈಟ್ ಟಾಪಿಂಗ್ ಅಗತ್ಯವಿದೆ ಎನ್ನುವುದೂ ಸೇರಿದಂತೆ ಹಲವು ವಿಷಯಗಳ ಸಾಧಕ-ಬಾಧಕಗಳನ್ನು ಪರಿಶೀಲಿಸಿ ರಸ್ತೆ ಸುಧಾರಣೆಗೆ ಒತ್ತು ನೀಡಲು ರಸ್ತೆ ಕೋಡ್ ಜಾರಿ ಮಾಡಲಾಗುವುದು ಎಂದರು. ಸಾಮಾನ್ಯವಾಗಿ 1 ಕಿ.ಮೀ. ನಿರ್ಮಾಣಕ್ಕೆ 72 ಲಕ್ಷ ರೂ. ವೆಚ್ಚವಾಗುತ್ತದೆ. ವೈಟ್ ಟಾಪಿಂಗ್ ರಸ್ತೆ ನಿರ್ಮಾಣ 9-10 ಕೋಟಿ ರೂ. ಹೆಚ್ಚು ಮೊತ್ತವಾಗುತ್ತದೆ. ಹೀಗಾಗಿ ಅಗತ್ಯವಿರುವ ಕಡೆ ಮಾತ್ರ ವೈಟ್‌ಟಾಪಿಂಗ್ ರಸ್ತೆ ನಿರ್ಮಿಸಲು ನಿರ್ಧರಿಸಿದ್ದು, ವೈಟ್ ಟಾಪಿಂಗ್‌ನಿಂದಾಗಿ ಹೆಚ್ಚು ಹಣ ವ್ಯಯವಾಗುತ್ತಿದೆ ಎಂದು ಸಿಎಂ ಸ್ಪಷ್ಟಪಡಿಸಿದರು.

**1,911 ಕಿ.ಮೀ. ರಸ್ತೆ ನಿರ್ಮಾಣ:** ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ 5 ವರ್ಷಗಳಲ್ಲಿ ವೈಟ್‌ಟಾಪಿಂಗ್ ರಸ್ತೆ ಕಾಮಗಾರಿ ಹೊರತುಪಡಿಸಿ 1,911.14 ಕಿ.ಮೀ. ಉದ್ದದ ರಸ್ತೆ ನಿರ್ಮಾಣ ಮಾಡಲಾಗಿದೆ. ಇದಕ್ಕಾಗಿ 1,449.63 ಕೋಟಿ ರೂ. ವ್ಯಯ ಮಾಡಲಾಗಿದೆ. ಪ್ರತಿ ರಸ್ತೆಯ ತಾಂತ್ರಿಕ ವಿನ್ಯಾಸ, ಅಗಲ, ರಸ್ತೆ ಪ್ರಾಮುಖ್ಯತೆ ಆಧಾರದ ಮೇಲೆ ರಸ್ತೆ ವೆಚ್ಚ ಬೇರೆ ಬೇರೆಯಾಗಿದೆ. ಕಳೆದ 5 ವರ್ಷಗಳಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ 100.60 ಕಿ.ಮೀ. ಉದ್ದದ ರಸ್ತೆ ಕಾಮಗಾರಿ ಪೂರ್ಣಗೊಳಿಸಲಾಗಿದೆ. ಇದಕ್ಕಾಗಿ 1014.30 ಕೋಟಿ ರೂ. ವೆಚ್ಚ ಮಾಡಲಾಗಿದೆ ಎಂದರು.

### ರಸ್ತೆ ನಿರ್ವಹಣೆಗೆ 4,110 ಕೋಟಿ ರೂ. ವೆಚ್ಚ

ಕಳೆದ 5 ವರ್ಷಗಳಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ 6,363.47 ಕಿ.ಮೀ. ಉದ್ದದ ರಸ್ತೆಗಳ ನಿರ್ವಹಣೆ, ಮರು ಡಾಂಬರೀಕರಣ, ಚರಂಡಿ, ಪಾದಚಾರಿ ಮಾರ್ಗ ನಿರ್ಮಾಣ ಮಾಡಲಾಗಿದ್ದು, ಇದಕ್ಕಾಗಿ 4,110.05 ಕೋಟಿ ರೂ. ವೆಚ್ಚ ಮಾಡಲಾಗಿದೆ. ಬಿಬಿಎಂಪಿಯಲ್ಲಿ 3 ವರ್ಷದ ಅವಧಿಯಲ್ಲಿ 6.371.26 ಉದ್ದದ ರಸ್ತೆಗಳಲ್ಲಿ ಗುಂಡಿ ಮತ್ತು ಹಾಳಾದ ರಸ್ತೆ ಗುರುತಿಸಲಾಗಿದ್ದು, 6,343.05 ಕಿ.ಮೀ ಉದ್ದದ ರಸ್ತೆಯನ್ನು ದುರಸ್ತಿಪಡಿಸಲಾಗಿದೆ ಎಂದು ಸಿಎಂ ತಿಳಿಸಿದರು.

ಸಂಜೆವಾಣಿ 1982



# ಪಾಲಿಕೆ ಆವರಣದಲ್ಲಿ ಪುನೀತ್ ಪುತ್ಥಳಿ ಸ್ಥಾಪನೆ

ಬೆಂಗಳೂರು, ಮಾ.24–ಇದೇ ತಿಂಗಳ 27ರಂದು ಪವರ್ ಸ್ಟಾರ್ ಡಾ.ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿ ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿ ಸ್ಥಾಪನೆಯಾಗಲಿದೆ.



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೌಕರರ ಸಂಘ ಪ್ರತಿಷ್ಠಾಪಿಸುತ್ತಿರುವ ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಲೋಕಾರ್ಪಣೆ ಮಾಡಲಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಸಂಘದ ಪ್ರಧಾನ ಕಾರ್ಯದರ್ಶಿ ಅಮೃತ್‌ರಾಜ್, ಬಿಬಿಎಂಪಿ ಕೇಂದ್ರ ಕಚೇರಿ ಆವರಣದಲ್ಲಿರುವ ಗಾಜಿನ ಮನೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಗಂಧದ ಗುಡಿ ಉದ್ಯಾನವನ ಉದ್ಘಾಟನೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕ ಮತ್ತು ಸಾಧಕಿಯರಿಗೆ ಡಾ.ಪುನೀತ್ ರಾಜ್‌ಕುಮಾರ್ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದರು.

ಖ್ಯಾತ ಚಲನಚಿತ್ರ ನಟರಾದ ಶ್ರೀನಾಥ್, ತಾರಾ ಅನುರಾಧಾ, ಖ್ಯಾತ ನಿರ್ದೇಶಕ ಎಸ್.ಕೆ.ಭಗವಾನ್, ಸಿಸಿಬಿ ಎಸಿಪಿ ಎಚ್.ಎಸ್.ಪರಮೇಶ್ವರ್, ಸಾಹಿತಿ ಮರುಳಸಿದ್ದಪ್ಪ, ಮಾಜಿ ಸಚಿವೆ ಬಿ.ಟಿ.ಲಲಿತಾನಾಯಕ್, ನಿರೂಪಕರಾದ ರಂಗನಾಥ್ ಭಾರದ್ವಾಜ್, ಜಯಪ್ರಕಾಶ್ ಶೆಟ್ಟಿ, ಹಿರಿಯ ಪತ್ರಕರ್ತ ಆರ್.ಪಿ.ಜಗದೀಶ್, ನೇತ್ರತಜ್ಞ ಡಾ.ರಂಗಸ್ವಾಮಿ.

ಖ್ಯಾತ ಹಿನ್ನೆಲೆ ಗಾಯಕರಾದ ವಿಜಯ್‌ಪ್ರಕಾಶ್, ರಮ್ಯಾ ವಸಿಷ್ಠ, ಹಿರಿಯ ಹಾಸ್ಯ ನಟ ಹೊನ್ನವಳ್ಳಿ ಕೃಷ್ಣ ಹಾಗೂ ಡಾ.ರಾಜ್ ಕುಟುಂಬದ ಆಪ್ತ ಚನ್ನ ಅವರಿಗೆ ಡಾ.ಪುನೀತ್ ರಾಜ್‌ಕುಮಾರ್ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅವರು ಹೇಳಿದರು.

ಡಾ.ಶಿವರಾಜ್‌ಕುಮಾರ್, ರಾಘವೇಂದ್ರ ರಾಜ್‌ಕುಮಾರ್, ಅಶ್ವಿನಿ, ಸಂಸದ ಪಿ.ಸಿ.ಮೋಹನ್, ಶಾಸಕ ರಿಜ್ವಾನ್ ಅರ್ಶದ್, ಬಿಬಿಎಂಪಿ ಆಡಳಿತಗಾರರಾದ ರಾಕೇಶ್‌ಸಿಂಗ್, ಮುಖ್ಯ ಆಯುಕ್ತ ಗೌರವ್ ಗುಪ್ತ, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಪ್ರಸಾದ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಜೆ.ಮಂಜುನಾಥ್ ಮತ್ತಿತರರು ಕಾರ್ಯಕ್ರಮದಲ್ಲಿ ಹಾಜರಿರಲಿದ್ದಾರೆ ಎಂದು ಮಾಹಿತಿ ನೀಡಿದರು.



# ಬಾಲಕಿ ಸಾವು: ಪಾಲಿಕೆಯಿಂದ 10 ಲಕ್ಷ ರೂ ಪರಿಹಾರ

ಬೆಂಗಳೂರು, ಮಾ.24– ಬಿಬಿಎಂಪಿ ಕಸದ ಲಾರಿ ಹರಿದು ಬಾಲಕಿ ಸಾವನ್ನಪ್ಪಿದ ಹಿನ್ನಲೆಯಲ್ಲಿ ಮೃತ ಅಕ್ಷಯಾ ಕುಟುಂಬಕ್ಕೆ 10 ಲಕ್ಷ ರೂಪಾಯಿ ಪರಿಹಾರ ಹಣವನ್ನು ನೀಡಲಾಯಿತು.

ನಗರದಲ್ಲಿಂದು ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತ, ಶಾಸಕ ಬೈರತಿ ಸುರೇಶ್, ಪಾಲಿಕೆ ವಿರೋಧ ಪಕ್ಷದ ಮಾಜಿ ನಾಯಕ ಅಬ್ದುಲ್ ವಾಜೀದ್ ಸೇರಿದಂತೆ ಪ್ರಮುಖರು 10 ಲಕ್ಷ ರೂಪಾಯಿ ಚೆಕ್ ಅನ್ನು ಹಸ್ತಾಂತರ ಮಾಡಿದರು.

ಮಾ.21ರಂದು ಹೆಬ್ಬಾಳದ ಬಳಿ ಬಿಬಿಎಂಪಿ ಕಸದ ಲಾರಿ ಹರಿದು ಬಾಲಕಿ ಅಕ್ಷಯಾ ಸಾವನ್ನಪ್ಪಿದ್ದಳು. ಹೀಗಾಗಿ ಇಂದು ಅಕ್ಷಯಾ ಕುಟುಂಬಸ್ಥರಿಗೆ ಬಿಬಿಎಂಪಿ ಐದು ಲಕ್ಷ, ಶಾಸಕ ಬೈರತಿ ಸುರೇಶ್ ಮೂರು ಲಕ್ಷ ಹಾಗೂ ಲಾರಿ ಮಾಲೀಕ 2 ಲಕ್ಷ ಸೇರಿದಂತೆ ಒಟ್ಟು ಹತ್ತು ಲಕ್ಷ ರೂಪಾಯಿ ಪರಿಹಾರದ ಚೆಕ್ ನೀಡಿದರು.

ಈ ಕುರಿತು ಶಾಸಕ ಬೈರತಿ ಸುರೇಶ್ ಪ್ರತಿಕ್ರಿಯಿಸಿ ವಿದ್ಯಾರ್ಥಿನಿ ಅಕ್ಷಾಯ ಅಪಘಾತಕ್ಕೆ ಸಂಬಂಧಿಸಿದಂತೆ ನಿನ್ನೆ ಆಯುಕ್ತರು ಮನೆಗೆ ಭೇಟಿ ನೀಡಿ ಐದು ಲಕ್ಷ ಪರಿಹಾರ ಘೋಷಿಸಿದರು. ಆದರೆ ಅಕ್ಷಾಯ ಅವರ ಕುಟುಂಬ ಬಹಳ ಬಡ ಕುಟುಂಬವಾಗಿದ್ದು ಮತ್ತಷ್ಟು ಸಹಾಯದ ಅವಶ್ಯಕತೆ ಅವರಿಗೆ ಇದೆ.

ಇಂದು ಮತ್ತೆ ಬಿಬಿಎಂಪಿ ಆಯುಕ್ತ ಗೌರವ್ ಗುಪ್ತಾ, ಬಿಬಿಎಂಪಿ ವಿಶೇಷ ಆಯುಕ್ತ ಮನೋಜ್ ಜೈನ್ , ಹಾಗೂ ಜಂಟಿ ಆಯುಕ್ತೆ ಶಿಲ್ಪ ಕುಟುಂಬದೊಂದಿಗೆ ಚರ್ಚಿಸಿ 10ಲಕ್ಷ ಪರಿಹಾರ ನೀಡಲಾಗಿದೆ.ಜೊತೆಗೆ ಇಬ್ಬರು ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಸಹಕಾರ ನೀಡಲಾಗುವುದು. ಬಿಬಿಎಂಪಿ ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ಮನೆ ನೀಡಲಾಗುವುದು ಎಂದು ನುಡಿದರು.

ಈ ಸಂದರ್ಭದಲ್ಲಿ ಮೃತ ಬಾಲಕಿಯ ಪೋಷಕರಾದ ನರಸಿಂಹ ಮೂರ್ತಿ ಹಾಗೂ ಗೀತಾಗೆ ಉಪಸ್ಥಿತರಿದ್ದರು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ



## 3 ವರ್ಷದಲ್ಲಿ ಬೆಂಗಳೂರು ರಸ್ತೆ ಅಭಿವೃದ್ಧಿಗೆ

# 6767 ಕೋಟಿ..

ಬೆಂಗಳೂರು, ಮಾ.24 – ಕಳೆದ ಮೂರು ವರ್ಷದಲ್ಲಿ ಬೆಂಗಳೂರು ನಗರ ರಸ್ತೆ ಅಭಿವೃದ್ಧಿ ಮತ್ತು ನಿರ್ಮಾಣ ಕಾಮಗಾರಿಗಳಿಗೆ 6767.79 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ವಿಧಾನಪರಿಷತ್‌ನ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಸದಸ್ಯ ಡಾ.ಕೆ.ಗೋವಿಂದರಾಜು ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು, 2018–19ರಲ್ಲಿ 1080 ಕೋಟಿ, 2019–20ನೇ ಸಾಲಿನಲ್ಲಿ 4494 ಕೋಟಿ, 2020–21ನೇ ಸಾಲಿನಲ್ಲಿ1193 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ. ಇದರಡಿ 3665 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

...ಪುಟ 2

## 6767 ಕೋಟಿ

800 ಚದುರ ಕಿಲೋ ಮೀಟರ್ ವಿಸ್ತೀರ್ಣದ ಬೆಂಗಳೂರಿನಲ್ಲಿ 13,873 ಕಿಲೋ ಮೀಟರ್ ಉದ್ದದ ರಸ್ತೆಗಳ ಜಾಲವಿದೆ ಎಂದು ಹೇಳಿದ್ದಾರೆ. ಈ ವೇಳೆ ಕಾಮಗಾರಿಗಳನ್ನು ಕೆಆರ್ ಐ ಡಿಎಲ್ ನೀಡುತ್ತಿರುವುದರಿಂದ ಗುಣಮಟ್ಟ ಹದಗೆಡುತ್ತಿರುವ ಬಗ್ಗೆ ಸದಸ್ಯರು ಆಕ್ಷೇಪ ವ್ಯಕ್ತ ಪಡಿಸಿದರು. ಇದಕ್ಕೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿಯವರು, ಕೆಆರ್‌ಐಡಿಎಲ್ ಸಂಸ್ಥೆಗೆ ಕೆಲಸ ನೀಡುವುದನ್ನು ನಾವು ಅಧಿಕಾರಕ್ಕೆ ಬಂದ ಮೇಲೆ ನಿಲ್ಲಿಸಿದ್ದೇವೆ. ಪ್ರತಿಪಕ್ಷದಲ್ಲಿದ್ದಾಗ ಆ ಸಂಸ್ಥೆಗೆ ಕೆಲಸ ನೀಡಬಾರದು ಎನ್ನುವುದು, ಅಧಿಕಾರಕ್ಕೆ ಬಂದ ಬಳಿಕ ಅದೇ ಸಂಸ್ಥೆಗೆ ಕೆಲಸ ನೀಡಿ ತಮಗೆ ಬೇಕಾದಂತೆ ಬಳಕೆ ಮಾಡಿಕೊಳ್ಳುವುದನ್ನು ಈ ಮೊದಲು ಕಂಡು ಬಂದಿತ್ತು. ತಾವು ಪ್ರಗತಿ ಪರಿಶೀಲನೆ ನಡೆಸಿದಾಗ ಕೆಆರ್‌ಐಡಿಎಲ್ ಸಂಸ್ಥೆಯ ಕೆಲಸದ ಗುಣಮಟ್ಟ ಸರಿ ಇಲ್ಲ ಎಂದು ಮನವರಿಕೆಯಾಗಿದೆ. ಅದಕ್ಕಾಗಿ ಕೆಲವು ಟೆಂಡರ್‌ಅನ್ನು ರದ್ದು ಗೊಳಿಸಲಾಗಿದೆ. ಪ್ರಗತಿಯಲ್ಲಿರುವ ಬಾಕಿ ಇರುವ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಹಾಗೂ ಗುಣಮಟ್ಟ ಸುಧಾರಿಸಲು ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಬಿಬಿಎಂಪಿಯಿಂದಲೇ ಕೆಲಸ ಮಾಡಿಸುವುದಾಗಿ ಭರವಸೆ ನೀಡಿದರು.

ಇದಕ್ಕೂ ಮೊದಲು ಸದಸ್ಯ ಗೋವಿಂದ ರಾಜು, ಸರ್ಕಾರ ನೀಡಿರುವ ಉತ್ತರ ಬಹಳ ದೊಡ್ಡದಿದೆ, ಇದನ್ನು ಓದಲು 15 ದಿನ ಬೇಕು ಎಂದಾಗ ಸಭಾಪತಿ ಅವರು, ಹಾಗಾದರೆ ಪ್ರಶ್ನೆಯನ್ನು ಮುಂದಕ್ಕೆ ಹಾಕಿ ಮತ್ತೊಂದು ದಿನ ಕೈಗೆತ್ತಿಕೊಳ್ಳಲೇ ಎಂದು ಪ್ರಶ್ನಿಸಿದರು. ಇಲ್ಲ ಈಗಲೇ ಕೇಳುತ್ತೇನೆ ಎಂದು ಸದಸ್ಯ ಗೋವಿಂದರಾಜು ಹೇಳಿದರು.

ಮಧ್ಯ ಪ್ರವೇಶಿಸಿದ ಮುಖ್ಯಮಂತ್ರಿಯವರು, ಸರ್ಕಾರ ನೀಡುವ ಮಾಹಿತಿ ಆಧರಿಸಿ ಗೋವಿಂದ ರಾಜು ಪ್ರಶ್ನೆ ಕೇಳುವುದಿಲ್ಲ, ಅವರಿಗಿರುವ ಮಾಹಿತಿ ಆಧರಿಸಿಯೇ ಮಾತನಾಡುತ್ತಾರೆ. ಪ್ರಶ್ನೆ ಕೇಳಲಿ ಎಂದರು.

ಪ್ರಶ್ನೆ ಕೇಳಿದ ಬಳಿ ಉತ್ತರಿಸಿದ ಮುಖ್ಯಮಂತ್ರಿಯವರು, ಬೆಂಗಳೂರಿನಲ್ಲಿ 7011 ಕಿಲೋ ಮೀಟರ್ ರಸ್ತೆಯನ್ನು 6767 ಕೋಟಿ ಖರ್ಚು ಮಾಡಿ ಅಭಿವೃದ್ಧಿ ಪಡಿಸಲಾಗುತ್ತಿದೆ. 4761 ಕೆಲಸಗಳು ಪ್ರಗತಿಯಲ್ಲಿವೆ. ಕಾವೇರಿ ನೀರು ಪೂರೈಸುವ ಕೊಳವೆ ಮಾರ್ಗದಲ್ಲಿ ರಸ್ತೆ ಕುಸಿದಿರುವುದನ್ನು ದುರಸ್ಥಿ ಮಾಡಲು ಹೆಚ್ಚಿನ ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ



# ಅಕ್ಷಯಾ ಕುಟುಂಬಕ್ಕೆ 10 ಲಕ್ಷ ಪರಿಹಾರ

**ಬೆಂಗಳೂರು, ಮಾ.24-** ಬಿಬಿಎಂಪಿ ಕಸದ ಲಾರಿ ಹರಿದು ಬಾಲಕಿ ಸಾವನ್ನಪ್ಪಿದ ಹಿನ್ನಲೆಯಲ್ಲಿ ಮೃತ ಅಕ್ಷಯಾ ಕುಟುಂಬಕ್ಕೆ 10 ಲಕ್ಷ ರೂಪಾಯಿ ಪರಿಹಾರ ಹಣವನ್ನು ನೀಡಲಾಯಿತು.



ನಗರದಲ್ಲಿಂದು ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ್ ಗುಪ್ತ, ಶಾಸಕ ಬೈರತಿ ಸುರೇಶ್, ಪಾಲಿಕೆ ವಿರೋಧ ಪಕ್ಷದ ಮಾಜಿ ನಾಯಕ ಅಬ್ದುಲ್ ವಾಜೀದ್ ಸೇರಿದಂತೆ ಪ್ರಮುಖರು 10 ಲಕ್ಷ ರೂಪಾಯಿ ಚೆಕ್ ಅನ್ನು ಹಸ್ತಾಂತರ ಮಾಡಿದರು.

ಮಾ.21ರಂದು ಹೆಬ್ಬಾಳದ ಬಳಿ ಬಿಬಿಎಂಪಿ ಕಸದ ಲಾರಿ ಹರಿದು ಬಾಲಕಿ ಅಕ್ಷಯಾ ಸಾವನ್ನಪ್ಪಿದ್ದಳು. ಹೀಗಾಗಿ ಇಂದು ಅಕ್ಷಯಾ ಕುಟುಂಬಸ್ಥರಿಗೆ ಬಿಬಿಎಂಪಿ ಐದು ಲಕ್ಷ, ಶಾಸಕ ಬೈರತಿ ಸುರೇಶ್ ಮೂರು ಲಕ್ಷ ಹಾಗೂ ಲಾರಿ ಮಾಲೀಕ 2 ಲಕ್ಷ ಸೇರಿದಂತೆ ಒಟ್ಟು ಹತ್ತು ಲಕ್ಷ ರೂಪಾಯಿ ಪರಿಹಾರದ ಚೆಕ್ ನೀಡಿದರು.

ಈ ಕುರಿತು ಶಾಸಕ ಬೈರತಿ ಸುರೇಶ್ ಪ್ರತಿಕ್ರಿಯಿಸಿ, ವಿದ್ಯಾರ್ಥಿನಿ ಅಕ್ಷಯಾ ಅಪಘಾತಕ್ಕೆ ಸಂಬಂಧಿಸಿದಂತೆ ನಿನ್ನೆ ಆಯುಕ್ತರು ಮನೆಗೆ ಭೇಟಿ ನೀಡಿ ಐದು ಲಕ್ಷ ಪರಿಹಾರ ಘೋಷಿಸಿದರು. ಆದರೆ ಅಕ್ಷಾಯ ಅವರ ಕುಟುಂಬ ಬಹಳ ಬಡ ಕುಟುಂಬವಾಗಿದ್ದು ಮತ್ತಷ್ಟು ಸಹಾಯದ ಅವಶ್ಯಕತೆ ಅವರಿಗೆ ಇದೆ. ಇಂದು ಮತ್ತೆ ಬಿಬಿಎಂಪಿ ಆಯುಕ್ತ ಗೌರವ್ ಗುಪ್ತಾ, ಬಿಬಿಎಂಪಿ ವಿಶೇಷ ಆಯುಕ್ತ ಮನೋಜ್ ಜೈನ್ ಹಾಗೂ ಜಂಟಿ ಆಯುಕ್ತೆ ಶಿಲ್ಪ ಕುಟುಂಬದೊಂದಿಗೆ ಚರ್ಚಿಸಿ 10ಲಕ್ಷ ಪರಿಹಾರ ನೀಡಲಾಗಿದೆ.ಜೊತೆಗೆ ಇಬ್ಬರು ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಸಹಕಾರ ನೀಡಲಾಗುವುದು. ಬಿಬಿಎಂಪಿ ರಾಜೀವ್ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ಮನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮೃತ ಬಾಲಕಿಯ ಪೋಷಕರಾದ ನರಸಿಂಹ ಮೂರ್ತಿ ಹಾಗೂ ಗೀತಾಗೆ ಉಪಸ್ಥಿತರಿದ್ದರು.

# ಬಿಬಿಎಂಪಿ ಪದವಿ ಪೂರ್ವ ಕಾಲೇಜು ಕಾರ್ಯಾರಂಭ




**ಬೆಂಗಳೂರು,ಮಾ.24-** ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಉತ್ತರಹಳ್ಳಿ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳ ಬಡವಿದ್ಯಾರ್ಥಿಗಳಿಗೆ ಪ್ರೌಢಶಾಲೆ ನಂತರದ ಪದವಿಪೂರ್ವ ಶಿಕ್ಷಣ ದೊರೆಯಬೇಕೆಂಬ ಸದಾಶಯದೊಂದಿಗೆ ಶಾಸಕ ಎಂ.ಕೃಷ್ಣಪ್ಪ ರವರ ಪರಿಶ್ರಮದಿಂದಾಗಿ ಉತ್ತರಹಳ್ಳಿಯಲ್ಲಿ ಬಿಬಿಎಂಪಿ ಪದವಿಪೂರ್ವ ಕಾಲೇಜು ಪ್ರಾರಂಭಕ್ಕೆ ಮಂಜೂರಾತಿ ದೊರಕಿದೆ.

2022-23ನೇ ಶೈಕ್ಷಣಿಕ ವರ್ಷದಿಂದ ಪದವಿಪೂರ್ವ ಕಾಲೇಜು ಹಾಗೂ ಸುಸಜ್ಜಿತ ಆಟದ ಮೈದಾನ ಉತ್ತರಹಳಿಯಲ್ಲಿ ಪ್ರಾರಂಭವಾಗುತ್ತಿದೆ. ಈ ಕಾಲೇಜಿನಲ್ಲಿ ಕಲಾ ವಿಭಾಗದಲ್ಲಿ ಎಚ್‌ಇಪಿಎಸ್, ವಾಣಿಜ್ಯ ವಿಭಾಗದಲ್ಲಿ ಎಚ್‌ಇಬಿಎ, ಸಿಇಬಿಎ ವ 'ಂತು ವಿಜ್ಞಾನ ವಿಭಾಗದಲ್ಲಿ ಪಿಸಿಎಂಬಿ, ಪಿಸಿಎಂಸಿ ಸಂಯೋಜನೆಗಳು ಲಭ್ಯವಿರುತ್ತದೆ.

ಉತ್ತರಹಳ್ಳಿ ಹಾಗೂ ಸುತ್ತಮುತ್ತಲಿನ ವಿದ್ಯಾರ್ಥಿಗಳು ಈ ಕಾಲೇಜಿನ ಸದುಪಯೋಗಪಡಿಸಿಕೊಳ್ಳಬೇಕೆಂದು ಶಾಸಕ ಎಂ.ಕೃಷ್ಣಪ್ಪ ಮನವಿ ಮಾಡಿದ್ದಾರೆ.

# ಶಕ್ತಿಧಾಮ ಕಾರ್ಯಕ್ರಮಕ್ಕೆ ಸಿಎಂಗೆ ಆಹ್ವಾನ



**ಬೆಂಗಳೂರು,ಮಾ.24-** ಜೇಮ್ಸ್ ಚಿತ್ರದ ಬಗ್ಗೆ ಯಾವುದೇ ಸಮಸ್ಯೆ ಇದ್ದರೂ ಬಗೆಹರಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ವಿಧಾನಸೌಧಧಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಟ ಶಿವರಾಜ್‌ಕುಮಾರ್ ದಂಪತಿ ಇಂದು ಭೇಟಿಯಾಗಿ ಏಪ್ರಿಲ್ ಎರಡನೆ ವಾರದಲ್ಲಿ ಮೈಸೂರಿನ ಶಕ್ತಿಧಾಮ ಕಟ್ಟಡ ಉದ್ಘಾಟನೆಗೆ ಆಹ್ವಾನ ನೀಡಿದರು. ಈ ವೇಳೆ ಜೇಮ್ಸ್ ಚಿತ್ರದ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಿನಿಮಾಗೆ ಸಂಬಂಧಿಸಿದ ಸಮಸ್ಯೆಗಳಿದ್ದರೆ ಬಗೆಹರಿಸುತ್ತೇವೆ. ಯಾವುದೇ ತೊಂದರೆ ಇದ್ದರೆ ಚಲನಚಿತ್ರ ವಾಣಿಜ್ಯ ಮಂಡಳಿಯನ್ನು ಸಂಪರ್ಕಿಸಿ ಎಂದು ಹೇಳಿದ್ದೇನೆ. ಜೇಮ್ಸ್ ನಿರ್ಮಾಪಕರಿಗೂ ಕೂಡ ತಿಳಿಸಿದ್ದೇನೆ. ಚಲನಚಿತ್ರ ಮಂಡಳಿಯಲ್ಲಿ ಆ ವ್ಯವಸ್ಥೆ ಇದ್ದು, ಅಲ್ಲಿ ಚರ್ಚೆ ನಡೆಸಲಾಗುತ್ತದೆ. ಯಾವುದೇ ಸಮಸ್ಯೆಯಿದ್ದರೂ ಬಗೆಹರಿಸಲಾಗುವುದು. ವಾಣಿಜ್ಯ ಮಂಡಳಿ ಜತೆ ನಾನು ಕೂಡ ಮಾತನಾಡಿದ್ದೇನೆ. ಮತ್ತೊಮ್ಮೆ ಬೇಕಾದರೆ ಮಾತನಾಡುತ್ತೇನೆ ಎಂದರು.